ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

EMAIL : dairyadadaari@gmail.com ಸಂಪುಟ: 01 ಸಂಚಿಕೆ: 187

ಬೆಲೆ ರೂ : 2.00

ರಾಯಚೂರು

ಪುಟ: 4

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶುಕ್ರವಾರ: 03-07-2026

## ಸರ್ಕಾರದ ವಿರುದ್ಧ ರೈತರು ದಂಗೆ ಏಳುತ್ತಾರೆ ಹುಷಾರ್ : ಅಶೋಕ್ ಎಚ್ಚರಿಕೆ

**ಬೆಂಗಳೂರು,ಜು.2–** ರೈತರು, ಕೃಷಿ ಕಾರ್ಮಿಕರು ಮತ್ತು ಗ್ರಾಮೀಣ ಜನರ ಬದುಕಿನೊಂದಿಗೆ ಚೆಲ್ಲಾಟವಾಡುವುದನ್ನು ನಿಲ್ಲಿಸಿ. ಈಗಲಾದರೂ ಎಚ್ಚೆತ್ತುಕೊಂಡು ಸಮರೋಪಾದಿಯಲ್ಲಿ ಬರ ನಿರ್ವಹಣಾ ಕಾರ್ಯ ಕೈಗೊಳ್ಳದಿದ್ದರೆ ಕಾಂಗ್ರೆಸ್ ಸರ್ಕಾರದ ವಿರುದ್ಧ ರೈತರು ದಂಗೆ ಏಳುವುದು ನಿಶ್ಚಿತ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಎಚ್ಚರಿಸಿದ್ದಾರೆ.

ತಮ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ರಾಜ್ಯ ಸರ್ಕಾರದ ವಿರುದ್ಧ ಪೋಸ್ಟ್ ಮಾಡಿರುವ ಅವರು, ಬರದ ಕರಿನೆರಳಲ್ಲಿ ಕರ್ನಾಟಕ, ಅಧಿಕಾರದ ಅಮಲಿನಲ್ಲಿ ಕಾಂಗ್ರೆಸ್ ಸರ್ಕಾರ ಎಂದು ಕಿಡಕಾರಿರುವ ಅವರು, ರಾಜ್ಯದ ರೈತರು, ಕೃಷಿ ಕಾರ್ಮಿಕರು ಹಾಗೂ ಗ್ರಾಮೀಣ ಜನತೆ ಭೀಕರ ಬರಗಾಲದ ಆತಂಕದಲ್ಲಿದ್ದರೂ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಮಾತ್ರ ಇನ್ನೂ ಕುಂಭಕರ್ಣ ನಿದ್ರೆಯಲ್ಲೇ ಮುಳುಗಿದೆ ಎಂದು ಆರೋಪಿಸಿದ್ದಾರೆ.

ಮುಂಗಾರು ಕೈಕೊಟ್ಟಿದೆ. ಜಲಾಶಯಗಳು ಬರಿದಾಗುತ್ತಿವೆ. ಬೆಳೆಗಳು ಕಣ್ಣೆದುರೇ ಒಣಗುತ್ತಿವೆ. ಕೃಷಿ ಕಾರ್ಮಿಕರಿಗೆ ಕೆಲಸವಿಲ್ಲದೆ ವಲಸೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ. ಆದರೆ ಕಾಂಗ್ರೆಸ್ ಸರ್ಕಾರಕ್ಕೆ ರೈತರಿಗಿಂತ ಅಧಿಕಾರ, ರಾಜಕೀಯ, ಭ್ರಷ್ಟಾಚಾರವೇ ಮುಖ್ಯವಾಗಿದೆ. ರಾಜ್ಯದ 150ಕ್ಕೂ ಹೆಚ್ಚು ತಾಲ್ಲೂಕುಗಳಲ್ಲಿ ಬರದ ಛಾಯೆ ಆವರಿಸಿದೆ. ಬೆಳಗಾವಿ,

ಬಾಗಲಕೋಟೆ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ಜಲಾಶಯಗಳು ಬರಿದಾಗುತ್ತಿದ್ದು, ಕುಡಿಯುವ ನೀರಿನ ಬಿಕ್ಕಟ್ಟು ಆರಂಭವಾಗಿದೆ ಎಂದು ಆತಂಕ ಹೊರಹಾಕಿದ್ದಾರೆ. ಮುಂಗಾರು ಮಳೆ ತೀವ್ರ



ಕೊರತೆಯಿಂದ ಕೃಷಿ ಬಿತ್ತನೆ ಕುಂಠಿತಗೊಂಡಿದೆ. ರೈತರು ಸಂಕಷ್ಟದಲ್ಲಿ ಸಿಲುಕಿದ್ದಾರೆ.

ಬರ ಘೋಷಣೆಗೆ ಅಗತ್ಯವಿರುವ ಎಲ್ಲ ಸೂಚ್ಯಂಕಗಳು ಸ್ಪಷ್ಟವಾಗಿದ್ದರೂ ಸರ್ಕಾರ ಇನ್ನೂ ನಿರ್ಧಾರ ಕೈಗೊಂಡಿಲ್ಲ. ಇಂತಹ ಗಂಭೀರ ಪರಿಸ್ಥಿತಿಯಲ್ಲೂ ರಾಜ್ಯಕ್ಕೆ ಪೂರ್ಣಾವಧಿ ಕೃಷಿ ಸಚಿವರೇ ಇಲ್ಲ. ರೈತರ ಬಗ್ಗೆ ಕಾಂಗ್ರೆಸ್ ಸರ್ಕಾರಕ್ಕಿರುವ ಕಾಳಜಿ ಇದೇನಾ? ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೇ, ರಾಜ್ಯದ ಜನತೆಗೆ ಉತ್ತರಿಸಿ ಎಂದು ಒತ್ತಾಯಿಸಿದ್ದಾರೆ.

ಬಹುತೇಕ ಜಿಲ್ಲಾ ಉಸ್ತುವಾರಿ ಸಚಿವರು ತಮ ಜಿಲ್ಲೆಗಳಲ್ಲಿ ಇದುವರೆಗೆ ಒಂದೇ ಒಂದು ಬರ ಪರಿಶೀಲನಾ ಸಭೆಯನ್ನೂ ನಡೆಸಿಲ್ಲ. ನಿಮ ಸರ್ಕಾರಕ್ಕೆ ಪರಿಸ್ಥಿತಿಯ ಗಂಭೀರತೆಯ ಅರಿವೇ ಇಲ್ಲವೇ? ಕೃಷಿ ಕಾರ್ಮಿಕರ ವಲಸೆ ತಡೆಯಲು ರಾಜಕೀಯ ಬದಿಗಿಟ್ಟು ವಿಬಿ–ಜಿರಾಮ್‌ಜಿ ಯೋಜನೆಯನ್ನು ಸಮರೋಪಾದಿಯಲ್ಲಿ ಜಾರಿಗೆ ತರಲು ಏಕೆ ಮೀನ ಮೇಷ ಎಣಿಸುತ್ತಿದ್ದೀರಿ? ಗ್ರಾಮೀಣ ಪ್ರದೇಶಗಳಲ್ಲಿ ಉದ್ಯೋ?ಗ ಸೃಷ್ಟಿಸುವ ಕಾಮಗಾರಿಗಳನ್ನು ತಕ್ಷಣ ಆರಂಭಿಸಲು ನಿಮ ಸರ್ಕಾರಕ್ಕೆ ಅಡ್ಡಿಯಾಗಿರುವುದು ಏನು? ಎಂದು ಪ್ರಶ್ನಿಸಿದ್ದಾರೆ. ರಾಜ್ಯ ಸರ್ಕಾರದ ವಿಬಿಜಿ ರಾಮ್ ಜಿ ಎಲ್ಲಿದೆ? ಮಳೆ ವಿಫಲವಾದರೆ ರೈತರಿಗೆ ಪರ್ಯಾಯ ಬೆಳೆ ವ್ಯವಸ್ಥೆ, ಮೇವು, ಉದ್ಯೋಗ ಮತ್ತು ಪರಿಹಾರ ನೀಡಲು ನಿಮ ಸರ್ಕಾರದ ಸಿದ್ಧತೆ ಏನು? ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಬಿಕ್ಕಟ್ಟು ದಿನದಿಂದ ದಿನಕ್ಕೆ ಉಲ್ಬಣವಾಗುತ್ತಿದೆ. ಟ್ಯಾಂಕರ್, ಬೋರ್‌ವೆಲ್ ಹಾಗೂ ಪರ್ಯಾಯ ನೀರು ಪೂರೈಕೆಗೆ ನಿಮ ತುರ್ತು ಕಾರ್ಯ ಯೋಜನೆ ಎಲ್ಲಿದೆ? ಎಂದು ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ತಕ್ಷಣವೇ ವಾಸ್ತವ ಪರಿಸ್ಥಿತಿಯ ಆಧಾರದ ಮೇಲೆ ಬರಪೀಡಿತ ಪ್ರದೇಶಗಳನ್ನು ಅಧಿಕೃತವಾಗಿ ಘೋಷಿಸಬೇಕು. ಎಲ್ಲ ಜಿಲ್ಲಾ ಉಸ್ತುವಾರಿ ಸಚಿವರು ತುರ್ತು ಸಭೆ ನಡೆಸಿ ಜಿಲ್ಲಾವಾರು ಬರ ನಿರ್ವಹಣಾ ಕಾರ್ಯಯೋಜನೆ ಪ್ರಕಟಿಸಬೇಕು. ಕೃಷಿ ಕಾರ್ಮಿಕರ ವಲಸೆ ತಡೆಯಲು ರಾಜಕೀಯ ಬದಿಗಿಟ್ಟು ವಿಬಿಜಿ ರಾಮ್ ಜಿ ಯೋಜನೆಯನ್ನು ಪರಿಣಾಮಕಾರಿಯಾಗಿ ಜಾರಿಗೆ ತರಬೇಕು ಹಾಗೂ ಗ್ರಾಮೀಣ ಉದ್ಯೋಗ ಕಾಮಗಾರಿಗಳನ್ನು ತಕ್ಷಣ ಆರಂಭಿಸಬೇಕು ಎಂದು ಒತ್ತಾಯಿಸಿದ್ದಾರೆ.

ರಾಜ್ಯವ್ಯಾಪಿ ವಿಬಿಜಿ ರಾಮ್ ಜಿ ಜಾರಿಗೆ ತಂದು ಕುಡಿಯುವ ನೀರು, ಮೇವು, ಪರ್ಯಾಯ ಬೆಳೆ ಹಾಗೂ ರೈತರಿಗೆ ತುರ್ತು ನೆರವು ಒದಗಿಸಬೇಕು. ಅನಾಥವಾಗಿರುವ ಕೃಷಿ ಇಲಾಖೆಗೆ ತಕ್ಷಣ ಪೂರ್ಣಾವಧಿ ಕೃಷಿ ಸಚಿವರನ್ನು ನೇಮಿಸಬೇಕು.ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರೇ, ಬರವನ್ನು ನಿರ್ಲಕ್ಷಿಸುವುದು ಎಂದರೆ ರೈತರ ಬದುಕನ್ನು ನಿರ್ಲಕ್ಷಿಸಿದಂತೆ ಎಂದು ಅಶೋಕ್ ಎಚ್ಚರಿಸಿದ್ದಾರೆ.

## ವಿದ್ಯುತ್ ಕಳ್ಳತನ, ಸೋರಿಕೆ ಪ್ರಕರಣದಡಿ ಜೆಸ್ಕಾಂನಿಂದ 10,40,549 ರೂ. ದಂಡ

ಧೈರ್ಯದ ದಾರಿ

**ರಾಯಚೂರು ಜುಲೈ 02:** ರಾಯಚೂರು ಜಿಲ್ಲೆಯ ನಗರ ವ್ಯಾಪ್ತಿಯಲ್ಲಿ ಬರುವ ರಾಯಚೂರು ನಗರ ಉಪ ವಿಭಾಗ, ಗಧಾರ್, ಸಿಂಗನೋಡಿ, ತಲಮಾರಿ, ಮಾನವಿ ನಗರ, ಕೋರವಿ, ಚಿಕ್ಕಬೂದೂರು, ಜೇರಬಂಡಿ, ಕೊಪ್ಪರ, ಎನ್.ಗಣೇಕಲ್, ಸಿರವಾರ ಕ್ರಾಸ್, ಯತ್‌ಗಲ್, ಅರಳಹಳ್ಳಿ, ಕುರುಕುಂದ, ಗೌಡೂರು, ಗೌಡೂರು ತಾಂಡ, ಯರಡೋಣಿ ಕ್ರಾಸ್, ಹೆಡಗಿಬಾಕ್ ಕ್ಯಾಂಪ್‌ನ ಗ್ರಾಹಕರಿಗೆ 2026ಡಿ ಜೂನ್ ಮಾಹೆಯಲ್ಲಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ವಿ), ಜಾಗೃತದಳ ಜೆಸ್ಕಾಂ ರಾಯಚೂರು ಇವರು ದಾಳಿ ಮಾಡಿ ವಿದ್ಯುತ್ ಕಳ್ಳತನ, ಸೋರಿಕೆ ಹಾಗೂ ದುರಪಯೋಗ ಪ್ರಕರಣಗಳನ್ನು ಪತ್ತೆ ಹಚ್ಚಿ ಒಟ್ಟು ಮೊತ್ತ 10,40,549 ರೂ.ಗಳನ್ನು ದಂಡ ವಿಧಿಸಿರುತ್ತಾರೆ.

ಅನಧಿಕೃತ ವಿದ್ಯುತ್ ಸಂಪರ್ಕಗಳನ್ನು ಅಧಿಕೃತಗೊಳಿಸಿಕೊಳ್ಳಲು ಹಾಗೂ ವಿದ್ಯುತ್ ನಿಲುಗಡೆಯಿಂದ ತಪ್ಪಿಸಲು ಬಾಕಿ ಇರುವ ವಿದ್ಯುತ್ ಬಿಲ್ ಮೊತ್ತವನ್ನು ಪಾವತಿಸುವಂತೆ ಗ್ರಾಹಕರಿಗೆ ಜೆಸ್ಕಾಂ ಕಾರ್ಯ ಮತ್ತು ಪಾಲನೆಯ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

6360866626

## ಎಸ್‌ಐಆರ್ ಯಶಸ್ಸಿಗೆ ಬಿಎಲ್‌ಎಗಳ ಜವಾಬ್ದಾರಿ ಅತ್ಯಗತ್ಯ: ಎನ್.ಎಸ್. ಬೋಸರಾಜು




ಧೈರ್ಯದ ದಾರಿ

**ಮಾನ್ವಿ, ಜು.2:** ಪ್ರಜಾಪ್ರಭುತ್ವದ ಯಶಸ್ಸಿಗೆ ನಿಖರ ಮತದಾರರ ಪಟ್ಟಿ ಅತ್ಯಂತ ಮುಖ್ಯವಾಗಿದ್ದು, ಯಾವುದೇ ಅರ್ಹ ಮತದಾರರು ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಬೂತ್ ಮಟ್ಟದ ಏಜೆಂಟರು (ಬಿಎಲ್‌ಎಗಳು) ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಮಾಜಿ ಸಚಿವರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಎನ್.ಎಸ್. ಬೋಸರಾಜು ಹೇಳಿದರು. ಪಟ್ಟಣದ ಖಾದ್ರಿ ಫಂಕ್ಷನ್ ಹಾಲ್‌ನಲ್ಲಿ ಮಾನ್ವಿ ಹಾಗೂ ಸಿರವಾರ ಬ್ಲಾಕ್ ಕಾಂಗ್ರೆಸ್ ಸಮಿತಿಗಳ ವತಿಯಿಂದ ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ (ಎಸ್‌ಐಆರ್) ಕುರಿತು ಆಯೋಜಿಸಿದ್ದ ಬಿಎಲ್‌ಎಗಳ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.ಮತದಾರರ ಮನೆಗಳಿಗೆ ಭೇಟಿ ನೀಡಿ ಮಾಹಿತಿ ಸಂಗ್ರಹಿಸಿ, ಅಗತ್ಯ ದಾಖಲೆಗಳೊಂದಿಗೆ ಅರ್ಜಿಗಳನ್ನು ಭರ್ತಿ ಮಾಡಲು ಸಾರ್ವಜನಿಕರಿಗೆ ಸಹಕಾರ ನೀಡಬೇಕು. ಎಸ್‌ಐಆರ್ ಪ್ರಕ್ರಿಯೆಯಲ್ಲಿ ನಿರ್ಲಕ್ಷ್ಯ ತೋರಿದರೆ ಪ್ರಜಾಪ್ರಭುತ್ವವೇ ಅಪಾಯಕ್ಕೆ ಸಿಲುಕುವ ಸಾಧ್ಯತೆ ಇದೆ ಎಂದು ಅವರು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ರಾಯಚೂರು ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ ಹಾಗೂ ಮಾನ್ವಿ ಶಾಸಕ ಹಂಪಯ್ಯ ನಾಯಕ, ಎಸ್‌ಐಆರ್ ಪ್ರಕ್ರಿಯೆಯನ್ನು ನೋಟು ಅಮಾನ್ಯೀಕರಣದ ಸಂದರ್ಭಕ್ಕೆ ಹೋಲಿಸಿ, ಕಷ್ಟವಾದರೂ ಪ್ರತಿಯೊಬ್ಬ ಮತದಾರರು ಅಗತ್ಯ ದಾಖಲೆಗಳೊಂದಿಗೆ ಈ ಪ್ರಕ್ರಿಯೆಯಲ್ಲಿ ಭಾಗವಹಿಸುವುದು ಪ್ರಜಾಪ್ರಭುತ್ವದ ಹಿತದೃಷ್ಟಿಯಿಂದ ಅಗತ್ಯ ಎಂದು ತಿಳಿಸಿದರು. ಮತದಾರರ ಹೆಸರು ಸೇರ್ಪಡೆ, ತಿದ್ದುಪಡಿ, ಸ್ಥಳಾಂತರ ಹಾಗೂ ಹೆಸರು ತೆಗೆದುಹಾಕುವ ಪ್ರಕ್ರಿಯೆಗಳ ಕುರಿತು ವಿವರಿಸಿ, ವಿಶೇಷವಾಗಿ ಯುವ ಮತದಾರರು, ಮಹಿಳೆಯರು ಹಾಗೂ ಹೊಸದಾಗಿ ಅರ್ಹತೆ ಪಡೆದವರ 2ನೇಪುಟಕ್ಕೆ

## ಓಟ್ ಇದ್ದರೆ ಮಾತ್ರ 5 ಗ್ಯಾರಂಟಿ: ಎನ್.ಎಸ್.ಬೋಸರಾಜು

ಧೈರ್ಯದ ದಾರಿ



**ಮಾನ್ವಿ:** ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಾಜಿ ಸಚಿವ ,ವಿಧಾನಪರಿಷತ್ ಸದಸ್ಯರಾದ ಎನ್.ಎಸ್.ಬೋಸರಾಜು ಸುದ್ದಿಗಾರರೊಂದಿಗೆ ಮಾತನಾಡಿ ಯಾರಿಗೆ ಓಟಿನ ಹಕ್ಕಿರುತ್ತದೆಯೋ ಅವರಿಗೆ ಮಾತ್ರ ಸರಕಾರದ 5 ಗ್ಯಾರಂಟಿ ಯೋಜನೆಯ ಸೌಲಭ್ಯಗಳನ್ನು ಪಡೆಯುವುದಕ್ಕೆ ಅರ್ಹರಾಗಿರುತ್ತಾರೆ ಎನ್ನುವುದು ಮುಖ್ಯಮಂತ್ರಿಗಳ ಚಿಂತನೆಯಾಗಿರುವುದರಿಂದ ಎಸ್.ಐ.ಆರ್.ನಲ್ಲಿ ಸರಿಯಾದ ಮಾಹಿತಿಯನ್ನು ನೀಡಬೇಕು .ತಮ್ಮ ಮತದಾನದ ಹಕ್ಕಿನಿಂದ ಹೊರಗುಳಿಯಬಾರದು ಎನ್ನುವ ಉದ್ದೇಶದಿಂದ ಸರಕಾರವೆ ಎಸ್.ಐ.ಆರ್.ಗೆ ಪೂರಕ ದಾಖಲೆಯಾಗಿರುವ ವಾಸಸ್ಥಳ ಪ್ರಮಾಣಪತ್ರವನ್ನು ಕಂದಾಯ ಇಲಾಖೆಯಿಂದ ನೀಡುವುದಕ್ಕೆ ಕ್ರಮ ಕೈಗೊಳ್ಳಲಾಗಿದೆ. ಚುನಾವಣ ಅಯೋಗದಿಂದ ಪ್ರತಿ 19 ವರ್ಷಕೊಮ್ಮೆ ದೇಶದಲ್ಲಿ ಸಮಗ್ರ ಮತಪಟ್ಟಿಯನ್ನು ಪರಿಷ್ಕರಿಸಲಾಗುತ್ತದೆ. ಅದ್ದರೆ ಕೇಂದ್ರ ಸರಕಾರವು ಕಳೆದ 13 ವರ್ಷಗಳಿಂದ ಅಧಿಕಾರದಲ್ಲಿದರೂ ಕೂಡ 2ನೇಪುಟಕ್ಕೆ

### ದಲಿತ ಸಾಹಿತ್ಯ ಪರಿಷತ್ತು ಯುವ ಘಟಕ ಮಾನ್ವಿ ತಾಲೂಕಿಗೆ ನೂತನ ಪದಾಧಿಕಾರಿಗಳ ನೇಮಕ

## ಅಂಜನಯ್ಯ ಸುಂಕೇಶ್ವರ ತಾಲೂಕು ಅಧ್ಯಕ್ಷರಾಗಿ ಆಯ್ಕೆ ಯುವಜನರಲ್ಲಿ ದಲಿತ ಸಾಹಿತ್ಯದ ಅರಿವು ಮೂಡಿಸಲು ಸಂಕಲ್ಪ



ಧೈರ್ಯದ ದಾರಿ

**ಮಾನ್ವಿ, ಜು.2:** ಪಟ್ಟಣದ ಗಾಂಧಿ ಕಾಲೇಜು ಸಭಾಂಗಣದಲ್ಲಿ ನಡೆದ ಸಭೆಯಲ್ಲಿ ದಲಿತ ಸಾಹಿತ್ಯ ಪರಿಷತ್ತು ಯುವ ಘಟಕದ ಮಾನ್ವಿ ತಾಲೂಕು ಘಟಕಕ್ಕೆ ನೂತನ ಪದಾಧಿಕಾರಿಗಳನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

ದಲಿತ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಹುಸೇನಪ್ಪ ಅಮರಾಪುರ ಅವರ ಆದೇಶದ ಮೇರೆಗೆ ಅಂಜನಯ್ಯ ಸುಂಕೇಶ್ವರ ಅವರನ್ನು ಯುವ ಘಟಕದ ತಾಲೂಕು ಅಧ್ಯಕ್ಷರನ್ನಾಗಿ ನೇಮಕ ಮಾಡಲಾಯಿತು. ಬಳಿಕ ಜಿಲ್ಲಾಧ್ಯಕ್ಷರು ಹಾಗೂ ನೂತನ ತಾಲೂಕು ಅಧ್ಯಕ್ಷರ ಆದೇಶದಂತೆ ವಿವಿಧ ಹುದ್ದೆಗಳಿಗೆ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.ಸಭೆಯಲ್ಲಿ ಮಾತನಾಡಿದ ನೂತನ ತಾಲೂಕು ಅಧ್ಯಕ್ಷ ಅಂಜನಯ್ಯ ಸುಂಕೇಶ್ವರ, ದಲಿತ ಸಾಹಿತ್ಯವನ್ನು ಯುವಜನತೆಗೆ ತಲುಪಿಸುವುದು ಹಾಗೂ ಸಾಮಾಜಿಕ ನ್ಯಾಯ, ಸಮಾನತೆ ಮತ್ತು ಮಾನವೀಯ ಮೌಲ್ಯಗಳ ಕುರಿತು ಜಾಗೃತಿ ಮೂಡಿಸುವುದು ಸಂಘಟನೆಯ ಪ್ರಮುಖ ಉದ್ದೇಶವಾಗಿದೆ. ತಾಲೂಕಿನಾದ್ಯಂತ ಸಾಹಿತ್ಯಿಕ, ಸಾಂಸ್ಕೃತಿಕ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ನೂತನ ಪದಾಧಿಕಾರಿಗಳು: ಗೌರವಾಧ್ಯಕ್ಷರಾಗಿ ರಾಮಲಿಂಗಪ್ಪ, ಕಾರ್ಯಾಧ್ಯಕ್ಷರಾಗಿ ಈರಣ್ಣ ಮರ್ಲಟ್ಟಿ, 2ನೇ ಪುಟಕ್ಕೆ




## ಜಿಲ್ಲಾಡಳಿತದಿಂದ ಡಾ.ಫ.ಗು.ಹಳಕಟ್ಟಿ ಜನ್ಮದಿನ ಆಚರಣೆ ಸಂಶೋಧನಾ ಕ್ಷೇತ್ರಕ್ಕೆ ದೊಡ್ಡ ಕೊಡುಗೆ: ಡಾ.ಚನ್ನಬಸವಯ್ಯ ಹಿರೇಮಠ



ಧೈರ್ಯದ ದಾರಿ

**ರಾಯಚೂರು ಜುಲೈ 02:** ಶರಣರ ಜೀವನ ಮೌಲ್ಯಗಳನ್ನು ಕಾಲಾತೀತವಾದ ಕಾಲ ಗರ್ಭದಲ್ಲಿ ಹುದುಗಿ ಹೋಗಿದ್ದ ವಚನ ಸಾಹಿತ್ಯವೆಂಬ ಅನರ್ಘ್ಯ ರತ್ನವನ್ನು ಶೋಧಿಸಿ, ಅನ್ವೇಷಿಸಿ ಸಂಗ್ರಹಿಸಿ, ಸಂಪಾದಿಸಿ ಪ್ರಕಟಿಸಿ ಸಂಶೋಧನಾ ಕ್ಷೇತ್ರಕ್ಕೆ ದೊಡ್ಡ ಕೊಡುಗೆ ನೀಡಿದ್ದಾರೆ ಎಂದು ಉಪನ್ಯಾಸಕರಾಗಿ ರಾಯಚೂರಿನ ವಿಶ್ರಾಂತ ಪ್ರಾಂಶುಪಾಲರು ಹಾಗೂ ಸಂಶೋಧಕರಾದ ಡಾ.ಚನ್ನಬಸವಯ್ಯ ಹಿರೇಮಠ ಅವರು ಹೇಳಿದರು. ಜುಲೈ 02ರ ಗುರುವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರದಲ್ಲಿ ಹಮ್ಮಿಕೊಳ್ಳಲಾಗಿದ ಡಾ.ಫ.ಗು.ಹಳಕಟ್ಟಿ ಅವರ ಜನ್ಮದಿನದ ಅಂಗವಾಗಿ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಕಾರ್ಯಕ್ರಮದಲ್ಲಿ ಉಪನ್ಯಾಸಕರಾಗಿ ಅವರು ಮಾತನಾಡಿದರು. ಒಂದು ವೇಳೆ ಶರಣ ಸಾಹಿತ್ಯದ ಕಡೆಗೆ ಲಕ್ಷ್ಯ ಹರಿಸದೇ ಇದ್ದರೆ ಇಂದು ನಮಗೆ ಶಿವಶರಣರ ವಚನಗಳು ದೊರಕುತ್ತಿರಲಿಲ್ಲ. ಕತ್ತಲ ಕಾಲ ಗರ್ಭದಲ್ಲಿದ್ದ ವಚನಗಳನ್ನು 2ನೇ ಪುಟಕ್ಕೆ

ಮೊದಲನೇ ಪುಟದಿಂದ

# ಎಸ್ಐಆರ್ ಯಶಸ್ಸಿಗೆ ಬಿಎಲ್ಎಗಳ ಜವಾಬ್ದಾರಿ ಅತ್ಯಗತ್ಯ: ಎನ್.ಎಸ್. ಬೋಸರಾಜು

ಹೆಸರುಗಳನ್ನು ಮತದಾರರ ಪಟ್ಟಿಗೆ ಸೇರಿಸಲು ಬಿಎಲ್ಎಗಳು ಹೆಚ್ಚಿನ ಗಮನ ಹರಿಸಬೇಕು ಎಂದು ಕರೆ ನೀಡಿದರು. ಕಾರ್ಯಾಗಾರದಲ್ಲಿ ಎಸ್ಐಆರ್‌ಗೆ ಸಂಬಂಧಿಸಿದ ಅರ್ಜಿ ನಮೂನೆಗಳ ಭರ್ತಿ, ದಾಖಲೆಗಳ ಪರಿಶೀಲನೆ ಹಾಗೂ ಆನ್‌ಲೈನ್ ಮತ್ತು ಆಫ್‌ಲೈನ್ ಪ್ರಕ್ರಿಯೆಗಳ ಕುರಿತು ಜಿಶಾನ್ ಅಲಿ ಸಿದ್ಧಿಕಿ ಮಾಹಿತಿ ನೀಡಿದರು.

ಈ ವೇಳೆ ಮಾತನಾಡಿದ ಎನ್.ಎಸ್. ಬೋಸರಾಜು, ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ಶೇ.100ರಷ್ಟು ನೋಂದಣಿ ಪೂರ್ಣಗೊಳಿಸುವ ಬಿಎಲ್ಎಗಳಿಗೆ ವಿಶೇಷ ಬಹುಮಾನ ನೀಡಲಾಗುವುದು ಎಂದು ಘೋಷಿಸಿದರು.

ಕಾರ್ಯಕ್ರಮದಲ್ಲಿ ಕೆಪಿಸಿಸಿ ಉಪಾಧ್ಯಕ್ಷ ಡಿಎಸ್ ಹುಲಗೇರಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಕೆ. ಶಾಂತಪ್ಪ, ರಾಮಣ್ಣ ಇರಬಗೇರಾ, ಮೊಹಮ್ಮದ್ ಶಾಲಂ, ಸೂಗಪ್ಪ ಸಾಹುಕಾರ, ಜಯಣ್ಣ, ಅಬ್ದುಲ್ ಗಫೂರ್ ಸಾಬ್, ಸಿರವಾರ ಬ್ಲಾಕ್ ಅಧ್ಯಕ್ಷ ಚುಕ್ಕಿ, ಅಮರೇಗೌಡ ಹಂಚಿನಾಳ, ಶಿವಕುಮಾರ, ರೇಣುಕಾ, ವಿಜಯಲಕ್ಷ್ಮಿ, ಕುರ್ಡಿ ಚಂದ್ರಶೇಖರ್, ಜಯವಂತರಾವ್ ಪತಂಗೆ, ಕಿರಲಿಂಗಪ್ಪ, ಜಿ. ಶಿವಮೂರ್ತಿ, ರುದ್ರಪ್ಪ ಅಂಗಡಿ, ಶಿವಣ್ಣ, ಖಾಲಿದ್ ಗುರು, ರೌಡೂರು ಮಹಾಂತೇಶ ಸ್ವಾಮಿ, ಅಮರೇಶಪ್ಪ, ತಿಪ್ಪಣ್ಣ ಬಾಗಲವಾಡ ಸೇರಿದಂತೆ ಕಾಂಗ್ರೆಸ್ ಮುಖಂಡರು, ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಬಿಎಲ್ಎಗಳು ಉಪಸ್ಥಿತರಿದ್ದರು.

# ಓಟ್ ಇದ್ದರೆ ಮಾತ್ರ 5 ಗ್ಯಾರಂಟಿ: ಎನ್.ಎಸ್.ಬೋಸರಾಜು

ಎಸ್.ಐ.ಆರ್. ಪರಿಷ್ಕರಿಸದೆ ಚುನಾವಣೆ ಹತ್ತಿರ ಬಂದಿರುವ ರಾಜ್ಯಗಳಲ್ಲಿ ಮಾತ್ರ ಸಂವಿಧಾನಿಕ ಸಂಸ್ಥೆಗಳಾದ ನ್ಯಾಯಾಲಯ,ಚುನಾವಣೆ ಅಯೋಗ, ಅದಾಯ ತೇರಿಗೆ ಇಲಾಖೆ.ಇ.ಡಿ.ಸೇರಿದಂತೆ ಇತರ ಸಂಸ್ಥೆಗಳನ್ನು ದುರುಪಯೋಗ ಪಡಿಸಿಕೊಳ್ಳುವ ಮೂಲಕ ಚುನಾವಣೆಯಲ್ಲಿ ಗೇಲುವು ಸಾಧಿಸಿ ಅಧಿಕಾರ ನಡೆಸುತ್ತಿದೆ ರಾಜ್ಯದಲ್ಲಿ 2002 ರಲ್ಲಿ ಎಸ್.ಐ.ಆರ್. ಪರಿಷ್ಕರಣೆ ನಡೆದಿದ್ದು ನಂತರ 24 ವರ್ಷಗಳ ನಂತರ ನಡೆಸಲಾಗುತ್ತಿದೆ. ಅದ್ದರಿಂದಲೇ ರಾಹುಲ್ ಗಾಂಧಿಯವರು ಓಟ್ ಚೋರಿ ಎಂದು ಹೇಳಿದ ನಂತರವೇ ಮತಪಟ್ಟಿಯ ಪರೀಷ್ಕರಣೆ ನಡೆಯುತ್ತಿದೆ. ಪಕ್ಷದ ಕಾರ್ಯಕರ್ತರು ತಮ್ಮ ಬೂತ್ ವ್ಯಾಪ್ತಿಯಲ್ಲಿ ಮನೆ,ಮನೆಗೆ ಭೇಟಿ ನೀಡಿ ಅರ್ಹ ಮತದಾರರು ಮತಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳುವುದಕ್ಕೆ ಕಾಂಗ್ರೇಸ್ ಪಕ್ಷದಿಂದ ರಾಜ್ಯ ಮಟ್ಟದಿಂದ ತಾಲೂಕು ಮಟ್ಟದವರೆಗೆ ಜಾಗೃತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗುತ್ತಿದೆ. ರಾಜ್ಯದ ಗೃಹ ಮಂತ್ರಿಗಳು ರಾಜ್ಯದಲ್ಲಿ ಅಕ್ರಮ ಮರಳುಗಾರಿಕೆ ತಡೆಯುವುದಕ್ಕೆ ಪೊಲೀಸ್ ಇಲಾಖೆಗೆ ಅಗತ್ಯ ಸೂಚನೆ ನೀಡಲಾಗಿದೆ. ತಾಲೂಕಿನಲ್ಲಿ ಅಕ್ರಮವಾಗಿ ಕೆರೆಗಳನ್ನು ತೋಡಿ ಮರಂ ಸಾಗಣಿಕೆ ಮಾಡುತ್ತಿರುವುದು ಕೇಳಿ ಬಂದಿದು. ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳಿಗೆ ಅಗತ್ಯ ಸೂಚನೆ ನೀಡಲಾಗಿದೆ ಕೆ.ಆರ್.ಡಿ.ಸಿ. ನಿಯಮದ ಪ್ರಕಾರವೇ ಕಲ್ಮಾಲ ದಿಂದ ಸಿಂಧನೂರು ವರೆಗೆ ಚತುಷ್ಪಥ ರಸ್ತೆ ನಿರ್ಮಾಣಕಾರ್ಯ ನಡೆದಿದು ಯಾವುದೆ ಅಕ್ರಮಗಳು ನಡೆದಿಲ್ಲ ಅಗತ್ಯವಿದವರು ಕಾನೂನು ಪ್ರಕಾರ ದೂರು ನೀಡಬಹುದು. ಈ ಬಾರಿ ಜೋಳ ಸಮೀಕ್ಷೆಯನ್ನು ಪ್ರಮಾಣಿಕವಾಗಿ ಮಾಡಿರುವುದರಿಂದ ನೈಜವಾಗಿ ಜೋಳ ಬೆಳೆದ ರೈತರಿಗೆ ಅನುಕೂಲವಾಗಿದೆ ಮಾರುಕಟ್ಟೆ ದರಕ್ಕಿಂತ 14 ನೂರು ರೂ ಪ್ರತಿ ಕ್ವಿಂಟಾಲ್ ಜೋಳಕ್ಕೆ ಬೆಂಬಲ ಬೆಲೆ ಅಡಿಯಲ್ಲಿ ದೋರೆಯುತ್ತಿದೆ.ಮಾನ್ವಿ.ಸಿರವಾರ,ಕವಿತಾಳ ಅಭಿವೃದ್ದಿಗೆ ಶಾಸಕ ಹಂಪಯ್ಯನಾಯಕರೊಂದಿಗೆ ಅನೇಕ ಅಭಿವೃದ್ಧಿ ಕಾಮಾಗಾರಿಗಳಿಗೆ ಚಾಲನೆ ನೀಡಲಾಗಿದೆ ಬಹುದಿನಗಳಿಂದ ಜನರ ಬೇಡಿಕೆಯಾಗಿದ್ದು ಮುಸ್ಟೂರು ಸೇತುವೆಯನ್ನು 11 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡುವುದಕ್ಕೆ ಸಂಪುಟ ಸಭೆಯಲ್ಲಿ ಅನುಮೋದನೆ ದೊರೆತ್ತಿದೆ.ಬಾಲವಾಡ ಸೇತುವೆ 1.5 ಕೋಟಿ.ಜಿನೂರ್ ಸೇತುವೆ 5.10 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲಾಗುವುದು. ತಾಲೂಕಿನಲ್ಲಿ ಶೇ 80 ರಷ್ಟು ಅಂಗನವಾಡಿ ಹಾಗೂ ಶಾಲಾ ಕಟ್ಟಡಗಳನ್ನು ನಿರ್ಮಾಣ ಮಾಡಲಾಗಿದೆ. ಮಾನ್ವಿಯಲ್ಲಿ 3ಕೋಟಿ ವೆಚ್ಚದಲ್ಲಿ ಗ್ರಾಮೀಣ ಆಸ್ಪತ್ರೆ ನಿರ್ಮಾಣ ಮಾಡಿ 3 ಜನ ತಜ್ಞ ವೈದ್ಯರನ್ನು ನೇಮಕ ಮಾಡಲಾಗುವುದು.ಹಾಗೂ ಎಂ.ಆರ್.ಐ.ಸ್ಕಾ??ನಿಂಗ್, ಅಪಘಾತ ಸಂದರ್ಭದ ತುರ್ತು ಚಿಕಿತ್ಸೆಗೆ ಟ್ರಾಮ ಕೇರ್ ಸೆಂಟರ್ ಪ್ರಾರಂಭಿಸಲಾಗುವುದು. ಪೋತ್ನಾಳ್ ನಲ್ಲಿ 16ಕೋಟಿ ವೆಚ್ಚದಲ್ಲಿ ಕವಿತಾಳದಲ್ಲಿ 6ಕೋಟಿ ವೆಚ್ಚದಲ್ಲಿ ನೂತನ ಆಸ್ಪತ್ರೆಗಳ ನಿರ್ಮಾಣಕ್ಕೆ ಮಂಜೂರಾತಿ ದೊರೆತ್ತಿದೆ. ಮಾಸಿಕ 1.25 ಸಾವಿರ ವೇತನವನ್ನು ನೀಡಿ ವೈದ್ಯರನ್ನು ನೇಮಕಮಾಡುವುದಕ್ಕೆ ಸರಕಾರ ಚಿಂತನೆ ನಡೆಸಿದೆ.

ಕಾಂಗ್ರೇಸ್ ಪಕ್ಷದಲ್ಲಿ ನಿಷ್ಟೆಯಿಂದ ಸೇವೆ ಸಲ್ಲಿಸಿರುವುದಕ್ಕೆ ಪಕ್ಷವು ನನನ್ನು ಎರಡು ಬಾರಿ ಶಾಸಕ,ವಿಧಾನ ಪರೀಷತ್ ಸದಸ್ಯ, ಕಾಡ ಅಧ್ಯಕ್ಷ, ಹೈದ್ರಾಬಾದ್ ಕರ್ನಾಟಕ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾಗಿ,ಮುಖ್ಯಮಂತ್ರಿಗಳಿಗೆ ರಾಜಕೀಯ ಕಾರ್ಯದರ್ಶಿಯಾಗಿ,ಸಚಿವರಾಗಿ ಸೇವೆ ಸಲ್ಲಿಸುವುದಕ್ಕೆ ಅವಕಾಶ ನೀಡಿದೆ ನನಗೆ ಸಚಿವಸ್ಥಾನಕ್ಕಿಂತ ಜನರಜೋತೆಗೆ ಇರುವುದೆ ಹೆಚ್ಚು ಇಷ್ಟ ನೀಡುತ್ತದೆ. ಕಾಂಗ್ರೇಸ್ ಪಕ್ಷದ ಎಲ್ಲಾ ಕಾರ್ಯಕ್ರಮಗಳಲ್ಲಿ ಕೂಡ ಸಕ್ರಿಯವಾಗಿ ಭಾಗವಹಿಸಿದೇನೆ ಮುಖ್ಯ ಮಂತ್ರಿಗಳು ಹಾಗೂ ರಾಷ್ಟ್ರೀಯ ಅಧ್ಯಕ್ಷರಾದ ರಾಹುಲ್ ಗಾಂಧಿಯವರು ಮತ್ತೊಮ್ಮೆ ಸಚಿವರಾಗಿ ಸೇವೆ ಸಲ್ಲಿಸುವುದಕ್ಕೆ ಅವಕಾಶ ನೀಡಿದಲ್ಲಿ ರಾಜ್ಯದ ಅಭಿವೃದ್ದಿಗೆ ಪ್ರಮಾಣಿಕವಾಗಿ ಸೇವೆ ಸಲ್ಲಿಸುತ್ತೇನೆ, ಇಲ್ಲದಿದ್ದರು ಕೂಡ ಪಕ್ಷದ ಕಾರ್ಯಕರ್ತರ ಸಂಪರ್ಕದಲ್ಲಿದುಕೊಂಡು ಕಾರ್ಯಕರ್ತರ ಕೇಲಸಗಳನ್ನು ಮಾಡಿಕೊಡುತ್ತೇನೆ. ಎಂದು ತಿಳಿಸಿದರು.

ಶಾಸಕ ಹಂಪಯ್ಯನಾಯಕ, ಬ್ಲಾಕ್ ಕಾಂಗ್ರೇಸ್ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್,ಮುಖಂಡರಾದ ರಾಜಾ ಸುಭಾಶ್ಚಂದ್ರನಾಯಕ,ಖಾಲಿದ್ ಗುರು ಇದ್ದರು.

## ಜಿಲ್ಲಾಡಳಿತದಿಂದ ಡಾ.ಫ.ಗು.ಹಳಕಟ್ಟಿ ಜನ್ಮದಿನ ಆಚರಣೆ ಸಂಶೋಧನಾ ಕ್ಷೇತ್ರಕ್ಕೆ ದೊಡ್ಡ ಕೊಡುಗೆ: ಡಾ.ಚನ್ನಬಸವಯ್ಯ ಹಿರೇಮಠ

ಒಬ್ಬ ಸಾಮಾನ್ಯ ವಕೀಲರಾಗಿದ್ದುಕೊಂಡು ಶರಣರ ತತ್ವಾದರ್ಶಗಳು ಅವರೊಳಗಿದ್ದ ವೈಚಾರಿಕ ಮಾನವ ಪ್ರಜ್ಞೆಯನ್ನು ಎತ್ತಿ ತೋರಿಸಿದ ಕೀರ್ತಿಗೆ ಭಾಜನರಾಗಿದ್ದಾರೆ ಎಂದರು.

ಡಾ.ಫ.ಗು. ಹಳಕಟ್ಟಿಯವರು ಪ್ರಾಥಮಿಕ ಶಿಕ್ಷಣ ಧಾರವಾಡದಲ್ಲಿ ಪಡೆದರು. 1896ರಲ್ಲಿ ಮ್ಯಾಟ್ರಿಕ್ ಪರೀಕ್ಷೆಯಲ್ಲಿ ಉನ್ನತ ಶ್ರೇಣಿಯಲ್ಲಿ ಪಾಸಾದರು. ಮುಂಬೈ ಸೇಂಟ್ ಝೇವಿಯರ್ ಕಾಲೇಜಿನಿಂದ 1901ರಲ್ಲಿ ಬಿಎಸ್‌ಸಿ ದ್ವಿತೀಯ ದರ್ಜೆ, 1904ರಲ್ಲಿ ಎಲ್‌ಎಲ್‌ಬಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದರು. 1904ರಲ್ಲಿ ಬೆಳಗಾವಿಯಲ್ಲಿ ವಕೀಲಿ ವೃತ್ತಿ ಆರಂಭಿಸಿದರು. ಕೆಲವೇ ವರ್ಷಗಳಲ್ಲಿ ಜನಪ್ರಿಯ ವಕೀಲರಾದರು. 1923ರಲ್ಲಿ ವಿಜಾಪುರಕ್ಕೆ ಬಂದು ನೆಲೆಸಿದರು. ಅದೇ ವರ್ಷ ಅವರ ದಕ್ಷ ವಕೀಲಿ ವೃತ್ತಿ ನೆನೆದ ಸರಕಾರ ಅವರನ್ನು ಪಬ್ಲಿಕ್ ಪ್ರಾಸಿಕ್ಯೂಟರ್ ಮತ್ತು ಸರಕಾರಿ ಪ್ಲೇಡರರೆಂದು ನೇಮಿಸಿತು ಎಂದರು.

1923ರಲ್ಲಿ ವಚನಶಾಸ್ತ್ರ ಸರ ಭಾಗ 1ಪ್ರಕಟವಾಯಿತು. ಈ ಕೆಲಸಕ್ಕೆ ಒಂದು ಸ್ವಂತ ಮುದ್ರಣಾಲಯ ಸ್ಥಾಪಿಸಬೇಕೆಂದು 1925ರಲ್ಲಿ ಇರುವ ಮನೆ ಮಾರಿ ಹಿತಚಿಂತಕ ಮುದ್ರಣಾಲಯ ಸ್ಥಾಪಿಸಿದರು. ಹಗಲಿರುಳು ಮುದ್ರಿಸಿದ ಪ್ರತಿ ಅಧ್ಯಯನ ಮಾಡಿ ತಿದ್ದಿ ತೀಡಿ ಮುದ್ರಣಕ್ಕೆ ಅಣಿಗೊಳಿಸುವ ಕಾರ್ಯ ಕೈಗೊಂಡರು ಎಂದರು.

ಕರ್ನಾಟಕದ ಇತಿಹಾಸದಲ್ಲಿಯೇ ಸಂಶೋಧನೆ ಪ್ರಕಟಿಸಲು ಒಂದು ಮುದ್ರಣಾಲಯ ಹಾಕಿದ ಉದಾಹರಣೆ ಇಲ್ಲ. ಅಂತಹ ಮುಂದಾಲೋಚನೆ, ತೀಕ್ಷ ಬುದ್ಧಿ, ಚಿಂತನೆ ಹಳಕಟ್ಟಿಯವರದಾಗಿತ್ತು. ಪತ್ರಿಕಾ ಮಾಧ್ಯಮದಿಂದ ಏಕ ಕಾಲಕ್ಕೆ 2ಪತ್ರಿಕೆ ಸಂಪಾದಿಸಿ, ಪ್ರಕಟಿಸಿ ಜನಸಮೂಹದ ಜವಾಬ್ದಾರಿ ತಿಳಿಸುವ ಕಾರ್ಯಕ್ಕೆ ಕೈ ಹಾಕಿದರು. 1926ರಲ್ಲಿ ಆರಂಭಿಸಿದ ಶಿವಾನುಭವ ಮಾಸಿಕ ಪತ್ರಿಕೆ 35 ವರ್ಷ ನಿರಂತರ ನಡೆಸಿದ ಕನ್ನಡ ಪತ್ರಿಕೆ ಎಂಬ ಹೆಗ್ಗಳಿಕೆಗೆ ಪಾತ್ರವಾಯಿತು. 1927ರಲ್ಲಿ ನವ ಕರ್ನಾಟಕ ಎಂಬ ವಾರ ಪತ್ರಿಕೆ ಆರಂಭಾವಾಯಿತು ಎಂದರು.

ಇದೇ ಸಂದರ್ಭದಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ತಹಶಿಲ್ದಾರ್ ಪರಶುರಾಮ, ಹಿರಿಯ ಸಾಹಿತ್ಯ ವೀರಹನುಮಾನ್, ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಬಿ.ವಿಜಯರಾಜೇಂದ್ರ, ರಂಗಭೂಮಿಯ ಕಲಾವಿದ ವಿ.ಎನ್.ಹಕ್ಕಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು, ವಿದ್ಯಾರ್ಥಿಗಳು ಇದ್ದರು.

## ಲಿಂಗಸುಗೂರು ಜಿಟಿಟಿಸಿ: ವಿವಿಧ ಕೋರ್ಸ್‌ಗಳ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 02:** ರಾಯಚೂರು ಜಿಲ್ಲೆಯ ಲಿಂಗಸುಗೂರು ಪಟ್ಟಣದ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಪ್ರಾಯೋಜಿಕತ್ವದ ತಂತ್ರಜ್ಞಾನ ತರಬೇತಿ ಸಂಸ್ಥೆಗಳಿಗೆ ನೆರವು ವಿಶೇಷ ಘಟಕ ಗಿರಿಜನ ಉಪಯೋಜನೆ ಎಐಟಿಟಿ (ಎಸಿ&ಎಸ್.ಟಿ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಎಲ್ಲಾ ವರ್ಗದ ಅಭ್ಯರ್ಥಿಗಳಿಗೆ ಎಸ್.ಎಸ್.ಎಲ್.ಸಿ/ಐಟಿಐ/ಡಿಪ್ಲೊಮಾ/ಬಿಇ ಮುಗಿಸಿರುವ ಅಭ್ಯರ್ಥಿಗಳಿಗೆ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ ಟೂಲ್ ರೂಮ್ ಮೆಷಿನಿಸ್ಟ್ (ಟಿಆರ್‌ಎಮ್) 01 ವರ್ಷ ಮತ್ತು 4 ತಿಂಗಳ ಸಿಎನ್‌ಸಿ ಆಪರೇಟರ್, ಟರ್ನರ್, ಮಿಲ್ಲಿಂಗ್, ಗ್ರೈಂಡಿಂಗ್ ಕೋರ್ಸ್‌ಗಳ ತರಬೇತಿಗೆ ಆಸಕ್ತರ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಎಐಟಿಟಿ (ಎಸಿ&ಎಸ್.ಟಿ) ಅಭ್ಯರ್ಥಿಗಳಿಗೆ ಶುಲ್ಕ ವಿನಾಯ್ತಿ ಇರುತ್ತದೆ. ಮತ್ತು ಉಳಿದ ಎಲ್ಲಾ ವರ್ಗದ ಅಭ್ಯರ್ಥಿಗಳಿಗೆ ಶುಲ್ಕ ಇರುತ್ತದೆ. ಆಸಕ್ತ ಅಭ್ಯರ್ಥಿಗಳು 16 ರಿಂದ 45 ವರ್ಷದೊಳಗಿನ ಯುವಕ/ಯುವತಿಯರು ಭಾಗವಹಿಸಬಹುದು.ತರಬೇತಿ ಅವಧಿಯಲ್ಲಿ (ಎಸಿ&ಎಸ್.ಟಿ) ಅಭ್ಯರ್ಥಿಗಳಿಗೆ ಶಿಷ್ಯ ವೇತನ ನೀಡಲಾಗುವುದು. ಮತ್ತು ತರಬೇತಿ ಮುಗಿದ ನಂತರ ಎಲ್ಲಾ ವರ್ಗದ ಅಭ್ಯರ್ಥಿಗಳಿಗೆ ಪ್ರಮಾಣ ಪತ್ರ ನೀಡಲಾಗುವುದು. ನಂತರ ಕಂಪನಿಗಳಲ್ಲಿ ಉದ್ಯೋಗವಕಾಶವನ್ನು (ಪ್ಲೇಸ್ಮೆಂಟ್) ಕಲ್ಪಿಸಿ ಕೊಡಲಾಗುವುದು.ಆಸಕ್ತರು ಅರ್ಜಿಯನ್ನು ಜುಲೈ 03ರೊಳಗಾಗಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಪ್ರಾಚಾರ್ಯರ ಮೊಬೈಲ್ ಸಂಖ್ಯೆ: 8548038965, 8073830118, 8310600693ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಲಿಂಗಸುಗೂರು ಸರ್ಕಾರಿ ಜಿಟಿಟಿಸಿ ಕಾಲೇಜಿನ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸ್ವಯಂ ಸೇವಕರಿಂದ ಜು.09ರಂದು ವಾಕ್–ಇನ್ ಸಂದರ್ಶನ

**ರಾಯಚೂರು ಜುಲೈ 02:** ರಾಯಚುರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಜಿಲ್ಲಾ ವಿಬಿಡಿಸಿ ಕಾರ್ಯಕ್ರಮಗಳಲ್ಲಿ 2026–27ನೇ ಸಾಲಿಗೆ ಮಂಜೂರಾದ 30 ಸ್ವಯಂ ಸೇವಕರ ಸೇವೆಯನ್ನು ಪಡೆಯಲು ಆಸಕ್ತರಿಂದ ವಾಕ್–ಇನ್ ಸಂದರ್ಶನದ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಜಿಲ್ಲೆಯ ರಾಯಚೂರು–11, ಸಿಂಧನೂರು–4, ಮಾನ್ವಿ–4, ಲಿಂಸಗ್ಗೂರು–7 ಹಾಗೂ ದೇವದುರ್ಗ–4 ಸ್ವಯಂ ಸೇವಕರ ಸೇವೆಯನ್ನು ಹಂಚಿಕೆ ಮಾಡಲಾಗಿದೆ. 100 ದಿನಗಳಿಗೆ ಮಾತ್ರ ಒಪ್ಪಂದದ ಅವಧಿ ಇರುತ್ತದೆ. ಡೆಂಗಿ ನಿಯಂತ್ರಣದಲ್ಲಿ ಪ್ರಮುಖ ಪಾತ್ರ ವಹಿಸುವ ಈಡಿಸ್ ಲಾರ್ವಾ ಉತ್ಪತ್ತಿ ತಾಣ ಚಟುವಟಿಕೆಯನ್ನು ನಗರ/ಪಟ್ಟಣ ಪ್ರದೇಶಗಳ ಡೆಂಗಿ ಸಮಸ್ಯಾತ್ಮಕ ಪ್ರದೇಶಗಳಲ್ಲಿ ಕೈಗೊಳ್ಳಲು 30 ಸ್ವಯಂ ಸೇವಕರ ಸೇವೆಯನ್ನು ಬಳಸಿಕೊಳ್ಳಲು ಅವಕಾಶವನ್ನು ಕಲ್ಪಿಸಲಾಗಿದೆ.

ಈ ಚಟುವಟಿಕೆಯಲ್ಲಿ ಭಾಗವಹಿಸುವ ಸ್ವಯಂ ಸೇವಕರು ಕನಿಷ್ಠ ಎಸ್ಎಸ್ಎಲ್ಸಿ ವಿದ್ಯಾರ್ಹತೆಯನ್ನು ಹೊಂದಿರಬೇಕು. ಚಟುವಟಿಕೆಯ ನಮೂನೆಯನ್ನು ಭರ್ತಿ ಮಾಡಲು ಶಕ್ತರಾಗಿರಬೇಕು. ಸ್ಥಳೀಯರಿಗೆ ಮೊದಲ ಆದ್ಯತೆ ನೀಡಲಾಗುವುದು. ದೈನಂದಿನ ಕ್ರಿಯಾ ಯೋಜನೆಯ ಅನ್ವಯ ನಿಗದಿತ ವೇಳಾಪಟ್ಟಿಯಂತೆ ಚಟುವಟಿಕೆಗೆ ತಪ್ಪದೇ ಹಾಜರಾಗಬೇಕು. ಚಟುವಟಿಕೆಗೆ ಅಗತ್ಯವಿರುವ ವರದಿ ನಮೂನೆಗಳು & ಲಾರ್ವಾನಾಶಕ ದ್ರಾವಣ ಇತ್ಯಾದಿಗಳ ಸಮೇತ ಚಟುವಟಿಕೆಯಲ್ಲಿ ಭಾಗವಹಿಸಬೇಕ. ದಿನ ಒಂದಕ್ಕೆ ಕನಿಷ್ಠ 60 – 65 ಅವರಣಗಳು ಅಂದರೆ ಮನೆಗಳು, ಕಚೇರಿ, ಆಸ್ಪತ್ರೆ, ಶಾಲೆ, ಕಾಲೇಜು. ವಾಣಿಜ್ಯ ಸಂಕೀರ್ಣಗಳು, ಸಿನೆಮಾ ಹಾಲ್ ಹಾಗೂ ಇತ್ಯಾದಿಗಳಲ್ಲಿ ಈಡಿಸ್ ಲಾರ್ವಾ ಉತ್ಪತ್ತಿ ತಾಣಗಳ ನಾಶ ಮಾಡುವ ಚಟುವಟಿಕೆಯನ್ನು ಕೈಗೊಳ್ಳಬೇಕು.

ಆಸಕ್ತರು ಜುಲೈ 09ರ ಬೆಳಿಗ್ಗೆ 10ಗಂಟೆಗೆ ರಾಯಚೂರಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಯವರ ಕಾರ್ಯಾಲಯಕ್ಕೆ ತಮ್ಮ ಸ್ವವಿವರದೊಂದಿಗೆ ವಿದ್ಯಾಭ್ಯಾಸದ ಪ್ರಮಾಣ ಪತ್ರ ಹಾಗೂ ಅನುಭವ ಪ್ರಮಾಣ ಪತ್ರ ಮತ್ತು ಇತರೆ ಪ್ರಮಾಣ ಪತ್ರಗಳ ಜೆರಾಕ್ಸ್ ಪ್ರತಿಗಳಿಗೆ ಗೆಜಿಟೆಡ್ ಅಧಿಕಾಗಳಿಂದ ಧೃಡಿಕೃರಿಸಿ ಸಂದರ್ಶನಕ್ಕೆ ಹಾಜರಾಗುವುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸದಸ್ಯ ಕಾರ್ಯದರ್ಶಿ ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೀನುಗಾರಿಕೆ ಇಲಾಖೆ: ಕಿಸಾನ್ ಕ್ರೆಡಿಟ್ ಕಾರ್ಡ್‌ಗಳ ವಿತರಣೆಗೆ ಅರ್ಜಿ ಆಹ್ವಾನ

**ರಾಯಚೂರು ಜುಲೈ 02:** ಮೀನುಗಾರಿಕೆ ಇಲಾಖೆಯಿಂದ 2026–27ನೇ ಸಾಲಿಗೆ ರಾಯಚೂರು, ಮಾನ್ವಿ, ದೇವದುರ್ಗ, ಸಿರವಾರ ಮತ್ತು ಅರಕೇರಾ ತಾಲ್ಲೂಕುಗಳಿಗೆ ಸಂಬಂಧಿಸಿದಂತೆ ಮೀನುಗಾರರ ಸಹಕಾರ ಸಂಘಗಳ ಸದಸ್ಯರಿಂದ, ವೃತ್ತಿಪರ ಮೀನುಗಾರರಿಂದ ಹಾಗೂ ಆಸಕ್ತ ಮೀನು ಕೃಷಿಕರಿಂದ ಮೀನು ಕೃಷಿ ಚಟುವಟಿಕೆಗಳನ್ನು ಕೈಗೊಳ್ಳಲು ಅನುಕೂಲವಾಗುವಂತೆ ಬ್ಯಾಂಕುಗಳ ಮೂಲಕ ಸಾಲದ ಸೌಲಭ್ಯ ಒದಗಿಸಿ, ಮೀನು ಕೃಷಿಕರಿಗೆ ಕಿಸಾನ್ ಕ್ರೆಡಿಟ್ ಕಾರ್ಡ್‌ಗಳನ್ನು ವಿತರಿಸಲು ಅರ್ಜಿ ಆಹ್ವಾನಿಸಲಾಗಿದೆ. ಈ ಯೋಜನೆಯಡಿ ಸೌಲಭ್ಯ ಪಡೆಯಲು ಆಸಕ್ತ ಮೀನುಗಾರರು/ ಮೀನು ಕೃಷಿಕರು ಆಗಸ್ಟ್ 14ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ಮೀನುಗಾರಿಕೆ ಇಲಾಖೆಯ ಕಚೇರಿಯನ್ನು ಸಂಪರ್ಕ ಮಾಡಬಹುದಾಗಿದೆ ಎಂದು ರಾಯಚೂರು ಮೀನುಗಾರಿಕೆಯ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಂಡೆ ಬಿದ್ದು 7 ಸಾವು: ಮೂವರ ಸ್ಥಿತಿ ಗಂಭೀರ



**ಬೆಂಗಳೂರು,ಜು.2**–ನಗರದ ಹೊರವಲಯದ ತಾವರೆಕರೆಯ ಮಾದಪಟ್ಟಣದಲ್ಲಿ ಕಲ್ಲು ಕ್ವಾರಿಯಲ್ಲಿ ಭೀಕರ ದುರಂತ ಸಂಭವಿಸಿ ಕೆಲಸ ಮಾಡುತ್ತಿದ್ದಾಗ ಹಠಾತ್ ಬಂಡೆ ಕುಸಿದು 7 ಕಾರ್ಮಿಕರು ಸಾವನ್ನಪ್ಪಿರುವ ದಾರುಣ ಘಟನೆ ಇಂದು ಬೆಳಿಗ್ಗೆ ನಡೆದಿದೆ.

ದುರಂತದಲ್ಲಿ ಬಂಡೆ ಕೆಳಗೆ ಸಿಲುಕಿ ಗಾಯಗೊಂಡವರನ್ನು ರಕ್ಷಿಸಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರಲ್ಲಿ ಮೂವರು ಸ್ಥಿತಿ ಗಂಭೀರವಾಗಿದೆ.

ಅವಘಡದಲ್ಲಿ ಮೃತಪಟ್ಟವರನ್ನು ರಾಮು (46), ರಾಜಪಾಲ್ ಸಿಂಗ್ (35), ಸತ್ಯನಾರಾಯಣ ಸಿಂಗ್ (31), ರಾಮ ವತಾರ್ ಸಿಂಗ್ (31), ರಾಜೇಂದ್ರ ಪ್ರಸಾದ್, ನೂಹರ್ ಸಿಂಗ್ ಮತ್ತು ಭುವನೇಶ್ವರ ಸಿಂಗ್ ಎಂದು ಗುರುತಿಸಲಾಗಿದೆ.

ದುರಂತದಲ್ಲಿ ಉತ್ತರ ಭಾರತದ ನಾಲ್ವರು, ಕರ್ನಾಟಕದ ಓರ್ವ ಕಾರ್ಮಿಕನಿಗೆ ಗಂಭೀರ ಗಾಯಗಳಾಗಿವೆ. ಗಾಯಾಳುಗಳಾದ ಗುಲಾಬ್ ಸಿಂಗ್ (27), ರಾಜ್ ಪಾಲ್ (30), ಚೋಟು (24), ನೋಹರ್ ಸಿಂಗ್ (21), ಆನಂದ್ (30) ಅವರನ್ನು ಮೈಸೂರು ರಸ್ತೆಯಲ್ಲಿರುವ ಆರ್.ಆರ್.ಆಸ್ಪತ್ರೆಗೆ ದಾಖಲಸಿಸಿ ತುರ್ತು ಚಿಕಿತ್ಸಾ ಘಟಕದಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಈ ಪೈಕಿ ಓರ್ವ ಕೂಲಿ ಕಾರ್ಮಿಕನ ಸ್ಥಿತಿ ಗಂಭೀರವಾಗಿದೆ ಎನ್ನಲಾಗಿದೆ. ಬಂಡೆ ಬಿದ್ದ ರಭಸಕ್ಕೆ ಮೃತದೇಹಗಳು ಚೆಲ್ಲಾಪಿಲ್ಲಿಯಾಗಿದ್ದರೆ, ಮೂರು ಟ್ರ್ಯಾಕ್ಟರ್‌ಗಳು ಸಂಪೂರ್ಣ ಜಖಂಗೊಂಡಿವೆ.

ಮಾದಪಟ್ಟಣದಲ್ಲಿನ ಕಾವೇರಿ ಕಂಪನಿಗೆ ಸೇರಿದ ಕ್ರಷರ್‌ನಲ್ಲಿ ಬೆಳಿಗ್ಗೆ 7:30ರ

ಕಲ್ಲು ಕ್ವಾರಿಯ ಮೇಲ್ಭಾಗದಲ್ಲಿ ಟ್ರ್ಯಾಕ್ಟರ್ ಸಹಾಯದಿಂದ ಭಾರೀ ಗಾತ್ರದ ಬಂಡೆಯೊಂದನ್ನು ಜರುಗಿಸುವ (ಸರಿಸುವ) ಕೆಲಸದಲ್ಲಿ 16 ಮಂದಿ ಕಾರ್ಮಿಕರು ತೊಡಗಿದ್ದರು.

ದುರದೃಷ್ಟವಶಾತ್, ಈ ವೇಳೆ ನಿಯಂತ್ರಣ ತಪ್ಪಿದ ಬಂಡೆಯು ನೇರವಾಗಿ ಕ್ವಾರಿಯ ಕೆಳಭಾಗದಲ್ಲಿ ಕೆಲಸ ಮಾಡುತ್ತಿದ್ದ ಕೂಲಿ ಕಾರ್ಮಿಕರ ಮೇಲೆ ಉರುಳಿ ಬಿದ್ದಿದೆ. ಬಂಡೆ ಬಿದ್ದ ತೀವ್ರತೆಗೆ ಸಿಲುಕಿದ ಒಂಬತ್ತು ಜನ ಕಾರ್ಮಿಕರು ಕ್ಷಣಮಾತ್ರದಲ್ಲಿ ಜೀವಬಿಟ್ಟಿದ್ದಾರೆ.

ಮೃತರನ್ನು ಬಿಹಾರ ಮತ್ತು ಅಸ್ಸಾಂ ಮೂಲದ ಕಾರ್ಮಿಕರು ಎಂದು ಗುರುತಿಸಲಾಗಿದ್ದು, ಇವರೆಲ್ಲರೂ ಹೊಟ್ಟೆಪಾಡಿಗಾಗಿ ಬೆಂಗಳೂರಿಗೆ ಬಂದು ಕಾವೇರಿ ಕ್ರಷರ್‌ನಲ್ಲಿ ದಿನಗೂಲಿ ಕೆಲಸ ಮಾಡುತ್ತಿದ್ದರು.

ದುರಂತ ಸಂಭವಿಸುತ್ತಿದ್ದಂತೆ ಇಡೀ ಪ್ರದೇಶದಲ್ಲಿ ಚೀರಾಟ, ಆಕ್ರಂದನ ಮುಗಿಲು ಮುಟ್ಟಿತ್ತು. ತಕ್ಷಣವೇ ಕಾರ್ಯಪ್ರವೃತ್ತರಾದ ಸ್ಥಳೀಯ ಸಾರ್ವಜನಿಕರು ಮತ್ತು ಇತರ ಕಾರ್ಮಿಕರು ರಕ್ಷಣಾ ಕಾರ್ಯಾಚರಣೆಗೆ ಇಳಿದಿದ್ದು, ಬಂಡೆಯಡಿ ಸಿಲುಕಿದ್ದ ನಾಲ್ಕು ಮೃತದೇಹಗಳನ್ನು ಹೊರತೆಗೆದಿದ್ದಾರೆ. ಇನ್ನುಳಿದ ಮೃತದೇಹಗಳನ್ನು ಹೊರತೆಗೆದು, ಗಾಯಗೊಂಡವರನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದೆ.

16 ಕಾರ್ಮಿಕರು ಕೆಲಸ: ಘಟನಾ ಸ್ಥಳಕ್ಕೆ ಭೇಟಿ ಬಳಿಕ ಮಾತನಾಡಿರುವ ಕೇಂದ್ರ ವಲಯದ ಉಪ ಪೊಲೀಸ್ ಮಹಾ ನಿರೀಕ್ಷಕ( ಡಿಐಜಿಪಿ) ಎಸ್.ಗಿರೀಶ್, ತಾವರಕೆರೆ ಪೊಲೀಸ್ ಠಾಣಾ ವ್ಯಾಪ್ತಿಯ ಎರಡು ಕ್ವಾರಿಯಲ್ಲಿ ಕೆಲಸ ನಡೆಯುತ್ತಿತ್ತು. ಕೆಳಗಡೆಯಿದ್ದ ಕ್ವಾರಿಯಲ್ಲಿ 16 ಕಾರ್ಮಿಕರು ಕೆಲಸ ಮಾಡ್ತಿದ್ದರು. ಬಂಡೆ ಬಿದ್ದು 16 ಕಾರ್ಮಿಕರ ಪೈಕಿ 7 ಮಂದಿ ಮೃತಪಟ್ಟಿದ್ದಾರೆ. ವಿಷಯ ತಿಳಿಯುತ್ತಿದ್ದಂತೆಯೇ ತಾವರೆಕೆರೆ ಪೊಲೀಸ್ ಇನ್ಸ್‌ಪೆಕ್ಟರ್ ಮಾರುತಿ ಹಾಗೂ ಸಿಬ್ಬಂದಿಗಳ ತಂಡ ಸ್ಥಳಕ್ಕೆ ದೌಡಾಯಿಸಿ ಪರಿಶೀಲನೆ ನಡೆಸಿ ಗುತ್ತಿಗೆದಾರ (ಮೇಸ್ತ್ರಿ) ಮತ್ತು ಕ್ರಷರ್ ಮಾಲೀಕರನ್ನು ಸ್ಥಳಕ್ಕೆ ಕರೆಸಿ, ತನಿಖೆಯನ್ನು ಚುರುಕುಗೊಳಿಸಲಾಗಿದೆ.

ಅಂದು ಚಿರತೆ ಬಲಿ: ಹಿಂದೆ ಇದೇ ಹುಲವೇನಹಳ್ಳಿ ಮತ್ತು ಮಾದಾಪಟ್ಟಣ ಭಾಗದ ಕ್ವಾರಿ ಪ್ರದೇಶದಲ್ಲಿ ಅಕ್ರಮವಾಗಿ ಬಂಡೆ ಸ್ಫೋಟಿಸಿದಾಗ ಕಲ್ಲು ಸಿಡಿದು ಚಿರತೆಯೊಂದು ಸಾವನ್ನಪ್ಪಿತ್ತು. ಆಗಲೇ ಈ ಭಾಗದ ಕ್ವಾರಿಗಳ ಸುರಕ್ಷತಾ ನಿಯಮಗಳ ಬಗ್ಗೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದರು. ಆದರೆ, ಅಧಿಕಾರಿಗಳ ನಿರ್ಲಕ್ಷ್ಯದ ಪರಮಾವಧಿಯಿಂದಾಗಿ ಇಂದು ಚಿರತೆಯ ಬೆನ್ನಲ್ಲೇ ಒಂಬತ್ತು ಮಂದಿ ಅಮಾಯಕರು ಬಲಿಯಾಗಿದ್ದಾರೆ. ಸಂಪೂರ್ಣ ಉಲ್ಲಂಘನೆ: ಕ್ವಾರಿಯ ಮೇಲ್ಭಾಗದಲ್ಲಿ ಅಪಾಯಕಾರಿ ರೀತಿಯಲ್ಲಿ ಟ್ರ್ಯಾಕ್ಟರ್ ಬಳಸಿ ಬಂಡೆ ಜರುಗಿಸುವಾಗ ಕೆಳಗೆ ಕಾರ್ಮಿಕರು ಕೆಲಸ ಮಾಡಲು ಹೇಗೆ ಬಿಡಲಾಯಿತು? ಯಾವುದೇ ಸುರಕ್ಷತಾ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡಿರಲಿಲ್ಲವೆ ಎನ್ನುವುದರ ಕುರಿತು ತನಿಖೆಯನ್ನು ಕೈಗೊಳ್ಳಲಾಗಿದೆ.

ವರದಿ ಬಂದ ಬಳಿಕ ಕಠಿಣ ಕ್ರಮ: ಡಿಕೆಶಿ

ಬೆಂಗಳೂರು ದಕ್ಷಿಣ ತಾಲ್ಲೂಕಿನ ಮಾದಪಟ್ಟಣದ ಕಲ್ಲುಕ್ವಾರಿಯಲ್ಲಿ ನಡೆದಿರುವ ದುರಂತದ ಬಗ್ಗೆ ಅಧಿಕೃತ ವರದಿ ಬಂದ ನಂತರ ಏನೆಲ್ಲಾ ಕಠಿಣ ಕ್ರಮಗಳನ್ನು ಕೈಗೊಳ್ಳಬೇಕು ಎಂಬ ಬಗ್ಗೆ ತೀರ್ಮಾನ ಮಾಡುತ್ತವೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.ಕಲ್ಲುಕ್ವಾರಿ ದುರಂತದ ಬಗ್ಗೆ ಸುದ್ದಿಗಾರರಿಗೆ ಪ್ರತಿಕ್ರಿಯೆ ನೀಡಿದ ಅವರು, ಪೊಲೀಸ್ ಅಧಿಕಾರಿಗಳು, ಗಣಿ ಮತ್ತು ಭೂವಿಜ್ಞಾನ ಅಧಿಕಾರಿಗಳು ದುರಂತ ಸ್ಥಳಕ್ಕೆ ಭೇಟಿ ನೀಡಿದ್ದಾರೆ. ಸ್ಫೋಟದಿಂದಾಗಿ ಈ ದುರಂತ ಸಂಭವಿಸಿಲ್ಲ ಎಂಬ ಮಾಹಿತಿ ಇದ್ದು, ಎಲ್ಲದರ ಬಗ್ಗೆ ವರದಿ ನೀಡುವಂತೆ ಕೇಳಿದ್ದೇನೆ ವರದಿ ಬಂದ ನಂತರ ಕ್ರಮಗಳು ಆಗಲಿವೆ ಎಂದರು.

ಇಂತಹ ಘಟನೆಗಳು ಮತ್ತೆ ಮರುಕಳುಹಿಸದಂತೆ ಎಚ್ಚರಿಕೆ ವಹಿಸುವುದು ಬಹಳ ಮುಖ್ಯ ಎಂದು ಅವರು ಹೇಳಿದರು.

ಈ ಕಲ್ಲುಗಣಿ ಕಾನೂನು ಬದ್ಧವಾಗಿ ನಡೆಯುತ್ತಿದೆಯೇ ಇಲ್ಲವೋ ಎಂಬ ಬಗ್ಗೆ ವರದಿ ಪಡೆದು ಮುಂದಿನ ಕ್ರಮ ಕೈಗೊಳ್ಳಲಾಗುವುದು. ಗಣಿ ನಡೆಸುವಾದಗ ಅದರದ್ದೆ ಆದ ಪಾಲನೆಗಳು ಇರುತ್ತವೆ. ಪಾಲನೆ ಆಗಿದೆಯೇ ಇಲ್ಲವೋ ಎಂದು ಪರಿಶೀಲನೆ ನಡೆಸಲಾಗುವುದು ಎಂದರು.ಕಳೆದ ಬಾರಿ ಸ್ಫೋಟದ ಸಂದರ್ಭದಲ್ಲಿ ಚಿರತೆ ಸತ್ತಿತ್ತು. ಹಿಂದೆ ತನಿಖೆ ಮಾಡದೆ ಪ್ರಕರಣ ಮುಚ್ಚಿ ಹಾಕಲಾಗಿದೆ ಎಂದು ಸ್ಥಳೀಯ ಶಾಸಕ ಎಸ್.ಟಿ. ಸೋಮಶೇಖರ್ ಆರೋಪಿಸಿದ್ದಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಶಾಸಕರು ನಮಗೆ ಮಾಹಿತಿ ನೀಡಿದ್ದು, ಅಧಿಕೃತ ವರದಿ ತರಿಸಿಕೊಂಡು ನಂತರ ಈ ಬಗ್ಗೆ ಮಾತನಾಡುತ್ತೇನೆ ಎಂದರು ಪರಿಹಾರದ ವಿಚಾರವಾಗಿ ಪ್ರತಿಕ್ರಿಯಿಸಿದ ಅವರು, ಮೊದಲು ಎಷ್ಟು ಜನ ಸತ್ತಿದ್ದಾರೆ ಎಂಬ ಮಾಹಿತಿಗಳು ಬರಲಿ ಆನಂತರ ಪರಿಹಾರದ ಬಗ್ಗೆ ತೀರ್ಮಾನ ಮಾಡುತ್ತೇವೆ. ತರಾತುರಿಯಲ್ಲಿ ಪರಿಹಾರ ಘೋಷಿಸಿದ ಮಾತ್ರಕ್ಕೆ ಸತ್ತವರು ಮರಳಿ ಬರುವುದಿಲ್ಲ. ಇದಕ್ಕೆ ಅದರದ್ದೆ ಆದ ಪ್ರಕ್ರಿಯೆಗಳಿವೆ.ಖಂಡಿತವಾಗಿ ಸಂತ್ರಸ್ತರಿಗೆ ಪರಿಹಾರ ನೀಡುಲಾಗವುದು ಎಂದರು.

# ಪತ್ರಕರ್ತ ಪಗಡೆ ವಿರುದ್ಧದ ಪ್ರಕರಣ ಹಿಂಪಡೆಯಲು ಆಗ್ರಹ



**ಜೇವರಗಿ,ಜು 2:** ಪತ್ರಕರ್ತರ ವಿರುದ್ಧ ದಾಖಲಿಸಿರುವ ಸುಳ್ಳು ಪ್ರಕರಣಗಳನ್ನು ತಕ್ಷಣ ಹಿಂಪಡೆಯಬೇಕು ಎಂದು ಜೈ ಕರವೇ ತಾಲೂಕು ಅಧ್ಯಕ್ಷ ಶರಬು ಕಲ್ಯಾಣಿ ನೆಲೋಗಿ ಆಗ್ರಹಿಸಿದ್ದಾರೆ

ಕಲ್ಯಾಣ ಕರ್ನಾಟಕ ನ್ಯೂಸ್ ಚಾನಲ್ ಮತ್ತು ಕಲ್ಯಾಣ ಜ್ಯೋತಿ ದಿನಪತ್ರಿಕೆಯ ಪ್ರಧಾನ ಸಂಪಾದಕ ಮಲ್ಲಿಕಾರ್ಜುನ ಪಗಡೆ ಸಾರ್ವಜನಿಕರ ಹಣದಿಂದ ನಡೆಯುವ ಅಭಿವೃದ್ಧಿ ಕಾಮಗಾರಿಗಳಲ್ಲಿನ ಅಕ್ರಮಗಳನ್ನು ದಾಖಲೆ ಆಧಾರಗಳೊಂದಿಗೆ ಬೆಳಕಿಗೆ ತಂದಿದ್ದಾರೆ

ವಿಶೇಷವಾಗಿ ರಸ್ತೆ ನಿರ್ಮಾಣ ಕಾಮಗಾರಿಗಳಲ್ಲಿ ಕೆಲವು ಗುತ್ತಿಗೆದಾರರು ಕಳಪೆ ಗುಣಮಟ್ಟದ ಕೆಲಸ ಮಾಡುತ್ತಿರುವುದು ಹಾಗೂ ಕಾಮಗಾರಿಗಳ ಪ್ರಮಾಣ ಕಡಿಮೆ ಮಾಡಿರುವುದು ಅವರ ವರದಿಗಳ ಮೂಲಕ ಬಹಿರಂಗವಾಗಿದೆ. ಇದರಿಂದ ಸಾರ್ವಜನಿಕರಿಗೆ ಹಾಗೂ ಸರ್ಕಾರದ ಗಮನಕ್ಕೆ ಅಕ್ರಮಗಳು ಬಂದಿರುವುದು ಶ್ಲಾಘನೀಯವಾಗಿದೆ ಆದರೆ, ಭ್ರಷ್ಟಾಚಾರದಲ್ಲಿ ತೊಡಗಿರುವ ಕೆಲ ಗುತ್ತಿಗೆದಾರರು ಮತ್ತು ಸಂಬಂಧಿತ ವ್ಯಕ್ತಿಗಳು ತಮ್ಮ ತಪ್ಪುಗಳನ್ನು ಮುಚ್ಚಿಹಾಕಲು ಉದ್ದೇಶಪೂರ್ವಕವಾಗಿ ಪ್ರಧಾನ ಸಂಪಾದಕರ ವಿರುದ್ಧ ಸುಳ್ಳು ಪ್ರಕರಣಗಳನ್ನು ದಾಖಲಿಸಿರುವುದು ಖಂಡನೀಯವಾಗಿದೆ ಕರ್ನಾಟಕ ಜರ್ನಲಿಸ್ಟ್ ಯೂನಿಯನ್ ತಾಲೂಕ ಅಧ್ಯಕ್ಷರಾದ ಮರೆಪ್ಪ ಬೇಗಾರ್, ನೈಜವಾಗಿ ವರದಿಗಳನ್ನು ಬಿತ್ತರಿಸುತ್ತಿರುವ ಪತ್ರಕರ್ತ ಮಲ್ಲಿಕಾರ್ಜುನ ಪಗಡೆಯವರ ವಿರುದ್ಧ ದಾಖಲಾಗಿರುವ ಸುಳ್ಳು ಪ್ರಕರಣವನ್ನು ತಕ್ಷಣವೇ ಹಿಂಪಡೆಯಬೇಕು. ಜೊತೆಗೆ, ಕಳಪೆ ಕಾಮಗಾರಿ ಮಾಡಿದ ಗುತ್ತಿಗೆದಾರರ ವಿರುದ್ಧ ಸಮಗ್ರ ತನಿಖೆ ನಡೆಸಬೇಕು ಎಂದು ಆಗ್ರಹಿಸಿದರು.

# ಪೊಲೀಸ್ ಠಾಣೆಯಲ್ಲಿ ಅನುಭವಸ್ಥ ಸಿಬ್ಬಂದಿಯಿದ್ದರೆ ಮೇಲಧಿಕಾರಿಗಳಿಗೆ ಆನೆ ಬಲ: ಪಿಎಸ್ಐ ಜಾಕ್ನಳ್ಳಿ



**ಸೇಡಂ,ಜ,02:**ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುವಾಗ ಕೇವಲ ಕಾನೂನಿನ ಜ್ಞಾನವಿದ್ದರೆ ಸಾಲದು, ಜನರ ನಾಡಿಮಿಡಿತ ಹಾಗೂ ಸ್ಥಳೀಯ ಪರಿಸ್ಥಿತಿಯ ಪ್ರಾಯೋಗಿಕ ಅನುಭವವೂ ಅಷ್ಟೇ ಮುಖ್ಯವಾಗಿರುತ್ತದೆ. ಶಿವಶರಣಪ್ಪ ಮಳಖೇಡಕರ್ ಎಎಸ್ಐ ಅವರು ಪೊಲೀಸ್ ಠಾಣೆಗಳಲ್ಲಿ ದೀರ್ಘಕಾಲ ಸೇವೆ ಸಲ್ಲಿಸಿ ಅನುಭವ ಹೊಂದಿರುವ ಹಿರಿಯ ಸಿಬ್ಬಂದಿ, ಅವರ ಅನುಭವವೇ ನಮ್ಮಗೆ ಆನೆ ಬಲ ಬಂದಂತಾಗಿತ್ತು ಎಂದು ಮಳಖೇಡ ಪೊಲೀಸ್ ಠಾಣೆಯ ಪಿಎಸ್ ಐ ಶಿವಶರಣಪ್ಪ ಜಾಕ್ನಳ್ಳಿ ಮುಕ್ತಕಂಠದಿಂದ ಶ್ಲಾಘಿಸಿದರು.

ತಾಲೂಕಿನ ಮಳಖೇಡ ಪೊಲೀಸ್ ಠಾಣೆಯಲ್ಲಿ ಸಿಬ್ಬಂದಿ ಶಿವಶರಣಪ್ಪ ಮಳಖೇಡಕರ್ ಎಎಸ್ ಐ ಅವರ ವಯೋನಿವೃತ್ತಿ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ನಮ್ಮ ಇಲಾಖೆಯಲ್ಲಿ ದಿನನಿತ್ಯದ ಸವಾಲುಗಳನ್ನು ಎದುರಿಸಲು ಅನುಭವಸ್ಥ ಸಿಬ್ಬಂದಿಯ ಮಾರ್ಗದರ್ಶನ ಅತ್ಯಂತ ಅಗತ್ಯ. ಕಾನೂನು ಸುವ್ಯವಸ್ಥೆ ಕಾಪಾಡುವುದು, ಕ್ಲಿಷ್ಟಕರ ಪ್ರಕರಣಗಳನ್ನು ಭೇದಿಸುವುದು ಮತ್ತು ಸಾರ್ವಜನಿಕರೊಂದಿಗೆ ಸೌಹಾರ್ದಯುತ ಬಾಂಧವ್ಯ ಬೆಳೆಸಿಕೊಳ್ಳುವಲ್ಲಿ ಹಿರಿಯ ಪೇದೆಗಳು ಹಾಗೂ ಮುಖ್ಯ ಪೇದೆಗಳ ಒಡನಾಟ ಇಲಾಖೆಗೆ ದಿಕ್ಸೂಚಿಯಾಗಿದೆ. ಮೇಲಧಿಕಾರಿಗಳಾಗಿ ನಾವು ಬರುವ ಮುನ್ನವೇ ಸ್ಥಳೀಯ ಇತಿಹಾಸ ಮತ್ತು ಅಪರಾಧಗಳ ಹಿನ್ನೆಲೆಯನ್ನು ಅರಿತಿರುವ ಇಂತಹ ಸಿಬ್ಬಂದಿ, ತನಿಖಾ ಪ್ರಕ್ರಿಯೆಯನ್ನು ಸುಗಮಗೊಳಿಸುತ್ತಾರೆ. ಶಿವಶರಣಪ್ಪ ಮಳಖೇಡಕರ್ ಎಎಸ್ಐ ಅವರು 32 ವರ್ಷದ ಸೇವೆಯಲ್ಲಿ ಕಪ್ಪು ಚುಕ್ಕೆ ಇಲ್ಲದೆ ನಿವೃತ್ತಿ ಹೊಂದುತ್ತಿರುವುದು ಸಂತಸದ ಸಂಗತಿ ಎಂದರು. ಈ ವೇಳೆಯಲ್ಲಿ ನಿವೃತ್ತ ಪೊಲೀಸ್ ಸಿಬ್ಬಂದಿ ಗೌರಿಶಂಕರ್, ಕ್ರೈಂ ಪಿಎಸ್ ಐ ಅಂಬುಬಾಯಿ, ಗ್ರಾಮ ಪಂಚಾಯತ್ ಅಧ್ಯಕ್ಷರಾದ ದಿನೇಶ್ ಪಾಟೀಲ್ ವೇದಿಕೆ ಮೇಲಿದ್ದರೂ,ಪೊಲೀಸ್ ಸಿಬ್ಬಂದಿಗಳಾದ ಅಲ್ಲಾಭಕ್ಷ,ಸಿದ್ದಲಿಂಗ, ಬಾಬುರಾವ್,ರಾಜಶೇಖರ, ಹಾಗೂ ಗ್ರಾಮಸ್ಥರಾದ ದೇವಾನಂದ್ ಪುರಾಣಿಕ, ಭೀಮರಾವ್ ಪಾಟೀಲ್, ರಾಜಪ್ಪ ಮಂಗಾ, ಅಂಬರೀಶ್ ಎಮ್ ಗುಡಿ, ಸೇರಿದಂತೆ ಹಲವರು ಮಾತನಾಡಿದರು.ಈ ವೇಳೆಯಲ್ಲಿ ವಿವಿಧ ಪೊಲೀಸ್ ಠಾಣೆಯ ಸಿಬ್ಬಂದಿಗಳು, ವಿವಿಧ ಗ್ರಾಮದಲ್ಲಿರುವ ಹಿರಿಯರು ಯುವಕರು ಇದ್ದರು.ನಿರೂಪಣೆ ಪೊಲಿಸ್ ಸಿಬ್ಬಂದಿ ಆನಂದ ಮಾಡಿದರೆ ಹಿರಿಯ ಪೊಲೀಸ್ ಸಿಬ್ಬಂದಿ ಮಲ್ಕಪ್ಪ ಸ್ವಾಗತಿಸಿದರು. ವಂದನಾರ್ಪಣೆ ಎಸ್ ಬಿ ಸಂಜು ಕುಮಾರ್ ಬಿರಾದರ್ ಮಾಡಿದರು.

ಪೊಲೀಸ್ ಇಲಾಖೆ ಎಂದರೆ ಸದಾ ಒತ್ತಡ, ಗಂಭೀರತೆ ಮತ್ತು ಕಠಿಣ ಸವಾಲುಗಳ ವಾತಾವರಣ. ಆದರೆ ಶಿವಶರಣಪ್ಪ ಮಳಖೇಡಕರ್ ಎಎಸ್ಐ ಅವರಲ್ಲಿ ಇಂತಹ ಕಠಿಣ ಪರಿಸ್ಥಿತಿಯಲ್ಲೂ ತಮ್ಮ ನಿಘಂಟಿನಲ್ಲಿ ಸಿಟ್ಟು ಎಂಬ ಪದಕ್ಕೇ ಜಾಗ ನೀಡದ ಅಪರೂಪದ ವ್ಯಕ್ತಿತ್ವ ಇವರದ್ದು.ಕರ್ತವ್ಯದ ಅವಧಿಯಲ್ಲಿ ಎಷ್ಟೇ ಒತ್ತಡವಿದ್ದರೂ, ಸಾರ್ವಜನಿಕರೊಂದಿಗೆ ಮತ್ತು ಸಹೋದ್ಯೋಗಿಗಳೊಂದಿಗೆ ಸದಾ ನಗುಮೊಗದಿಂದ, ಪ್ರೀತಿಯಿಂದ ವರ್ತಿಸುವ ಇವರ ಸರಳತೆ ಎಲ್ಲರಿಗೂ ಮಾದರಿಯಾಗಿದೆ.ಖಾಕಿ ಉಡುಪಿನೊಳಗಿರುವ ಈ ಶಾಂತ ಸ್ವಭಾವದ ಸರಳ ಜೀವಿ,ಕೇವಲ ಇಲಾಖೆಯ ಸಿಬ್ಬಂದಿಗೆ ಮಾತ್ರವಲ್ಲದೆ ಅವರು ಕರ್ತವ್ಯ ನಿರ್ವಹಿಸಿರುವ ಎಲ್ಲಾ ಠಾಣೆಗಳಲ್ಲಿ ಬರುವ ಸಾರ್ವಜನಿಕರ ಮನ ಗೆಲ್ಲುವಲ್ಲಿಯೂ ಯಶಸ್ವಿಯಾಗಿದ್ದಾರೆ.

ಶಿವಶರಣಪ್ಪ ಜಾಕ್ನಳ್ಳಿ ಪೊಲೀಸ್ ಠಾಣೆಯ ಪಿಎಸ್ ಐ ಮಳಖೇಡ

ಇಂದಿನ ದಿನಮಾನಗಳಲ್ಲಿ ಗೂಗಲ್ ನಲ್ಲಿ ಎಲ್ಲಾ ರೀತಿಯ ಸೌಲಭ್ಯಗಳು ದೊರೆಯುತ್ತವೆ ಆದರೆ ವ್ಯಕ್ತಿಯ ವ್ಯಕ್ತಿತ್ವದಲ್ಲಿ ದೊರೆಯುವಂತಹ ಅನುಭವ ಸಿಗದು ಅದಕ್ಕೆ ಉದಾಹರಣೆ ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತಿ ಹೊಂದುತ್ತಿರುವ ಶಿವಶರಣಪ್ಪ ಮಳಖೇಡಕರ್ ಎಎಐ ಅನುಭವದ ಮಾತುಗಳು ಆಲಿಸಿದ್ದೇವೆ ಅವರ ಅನುಭವ ಜೀವನಪೂರ್ತಿ ಪಾಲಿಸುತ್ತೇನೆ.

ಸಿದ್ದಲಿಂಗ ಪೊಲೀಸ್ ಸಿಬ್ಬಂದಿ.

ಪೊಲಿಸರು ಎಂದರೆ ಭಯವಲ್ಲ ಭರವಸೆ ಎಂಬ ಭಾವ ಸಾರ್ವಜನಿಕರಿಗೆ ಅರಿವು ಮೂಡಿಸುವವರಲ್ಲಿ ನನ್ನ ಸ್ನೇಹಿತ ನಿವೃತ್ತಿ ಹೊಂದುತ್ತಿರುವ ಶಿವಶರಣಪ್ಪ ಮಳಖೇಡಕರ್ ಎಎಸ್ಐ ಅವರಿಗೆ ಸಲ್ಲುತ್ತದೆ. ಏಕೆಂದರೆ ಅವರು ನಿರ್ವಹಿಸಿರುವ ವಿವಿಧ ಪೊ?ಲಿಸ್ ಠಾಣೆಯಲ್ಲಿ ಸಾರ್ವಜನಿಕರಿಗೆ ಮೇಲಾಧಿಕಾರಿಗಳಿಗೆ ಭರವಸೆಯ ವ್ಯಕ್ತಿಯಾಗಿ ಗುರುತಿಸಿಕೊಂಡವರು. ಗೌರಿಶಂಕರ್ ನಿವೃತ್ತ ಪೊಲೀಸ್ ಸಿಬ್ಬಂದಿ

# ಮನೆಗೆ ಬರುವ ಬಿಎಲ್ಒಗಳಿಗೆ ಸರಿಯಾದ ಮಾಹಿತಿ ನೀಡಿ: ತಹಶೀಲ್ದಾರ್ ಸುರೇಶ್ ಅಂಕಲಗಿ



**ಯಾದಗಿರಿ:** ರಾಜ್ಯದಲ್ಲಿ ನಡೆಯುತ್ತಿರುವ ವಿಶೇಷ ಮತದಾರರ ಸಮಗ್ರ ಪರಿಷ್ಕರಣೆ (ಎಸ್ಐಆರ್) ಕಾರ್ಯದ ಅಂಗವಾಗಿ ಮನೆಗೆ ಭೇಟಿ ನೀಡುವ ಬಿಎಲ್ಒಗಳಿಗೆ ಮತದಾರರು ಅಗತ್ಯ ದಾಖಲೆಗಳೊಂದಿಗೆ ಸರಿಯಾದ ಮಾಹಿತಿ ನೀಡುವ ಮೂಲಕ ಸಹಕರಿಸಬೇಕು ಎಂದು ಯಾದಗಿರಿ ತಹಶೀಲ್ದಾರ್ ಸುರೇಶ್ ಅಂಕಲಗಿ ಮನವಿ ಮಾಡಿದರು.

ನಗರದ ಮೈಲಾಪುರ ಅಗಸಿ ಪ್ರದೇಶದಲ್ಲಿ ನಡೆಯುತ್ತಿದ್ದ ಎಸ್ಐಆರ್ ಕಾರ್ಯವನ್ನು ಬುಧವಾರ ಪರಿಶೀಲಿಸಿದ ಅವರು, ಬಿಎಲ್ಒಗಳು ಮನೆಮನೆಗೆ ಭೇಟಿ ನೀಡಿ ಮತದಾರರ ಮನೆಗಳ ಬಾಗಿಲಿಗೆ ಸ್ಟಿಕರ್ ಅಂಟಿಸಿ ಎನ್ಯೂಮರೇಷನ್ (Enumeration) ಫಾರಂ ವಿತರಿಸುತ್ತಿರುವ ಕುರಿತು ಮಾಹಿತಿ ಪಡೆದರು.ಬಿಎಲ್ಒಗಳು ಮತದಾರರಿಗೆ ಫಾರಂ ವಿತರಿಸುವುದರೊಂದಿಗೆ ಅದನ್ನು ಹೇಗೆ ಭರ್ತಿ ಮಾಡಬೇಕು, ಯಾವ ದಾಖಲೆಗಳನ್ನು ಲಗತ್ತಿಸಬೇಕು ಹಾಗೂ ಭರ್ತಿ ಮಾಡಿದ ನಮೂನೆಯನ್ನು ನಿಗದಿತ ಅವಧಿಯೊಳಗೆ ವಾಪಸ್ ಸಲ್ಲಿಸಬೇಕು ಎಂಬ ಕುರಿತು ಸಮಗ್ರ ಮಾಹಿತಿ ನೀಡುತ್ತಿರುವುದಾಗಿ ಅಧಿಕಾರಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತಹಶೀಲ್ದಾರ್ ಸುರೇಶ್ ಅಂಕಲಗಿ, ಚುನಾವಣಾ ಆಯೋಗದ ನಿರ್ದೇಶನದಂತೆ ರಾಜ್ಯಾದ್ಯಂತ ವಿಶೇಷ ಮತದಾರರ ಪರಿಷ್ಕರಣೆ ಕಾರ್ಯ ನಡೆಯುತ್ತಿದೆ. ಜುಲೈ 29ರವರೆಗೆ ಬಿಎಲ್ಒಗಳು ಮನೆಮನೆಗೆ ಭೇಟಿ ನೀಡಿ ಎನ್ಯೂಮರೇಷನ್ ಫಾರಂ ವಿತರಿಸಲಿದ್ದಾರೆ. ಮತದಾರರು ಅಗತ್ಯ ದಾಖಲಾತಿಗಳೊಂದಿಗೆ ನಿಖರ ಮಾಹಿತಿ ನೀಡಿ ಈ ಕಾರ್ಯಕ್ಕೆ ಸಹಕರಿಸಬೇಕು. ಯಾವುದೇ ರೀತಿಯ ಗೊಂದಲ ಅಥವಾ ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ ಎಂದು ಹೇಳಿದರು. Holidays& Seasonal Events

ಪರಿಶೀಲನೆ ವೇಳೆ ಕಂದಾಯ ನಿರೀಕ್ಷಕ ಗಿರೀಶ್, ಮೇಲ್ವಿಚಾರಕ ಸುರೇಶ್ ಹಾಗೂ ಬಿಎಲ್ಒಗಳಾದ ಪ್ರಭಾವತಿ, ಈರಮ್ಮ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಬಿಡದಿಗೊಂದು ನ್ಯಾಯ?, ಆಳಂದಗೊಂದು ನ್ಯಾಯ ಸರಿಯೇ?



**ಆಳಂದ:ಜು.2:** ರೈತರ ಜಮೀನು ಖರೀದಿಸುವಲ್ಲಿ ಸರ್ಕಾರ ಬಿಡದಿಗೊಂದು ನ್ಯಾಯ ಆಳಂದಗೊಂದು ನ್ಯಾಯ ಪದ್ಧತಿ ಅನುಸರಿಸುತ್ತಿರುವುದು ಸರಿಯೇ ಎಂದು ಕಲಬುರಗಿ ಜಿಲ್ಲಾ ಬಿಜೆಪಿ ರೈತ ಮೋರ್ಚಾ ಉಪಾಧ್ಯಕ್ಷ ಸಿದ್ದು ಹಿರೋಳಿ ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರದಲ್ಲಿ ಪ್ರಶ್ನಿಸಿದ್ದಾರೆ.

ಬುಧುವಾರ ಆಳಂದ ತಹಸೀಲದಾರರ ಮೂಲಕ ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರದಲ್ಲಿ ಹಲವು ವಿಷಯ ಪ್ರಸ್ತಾಪಿಸುರುವ ಅವರು, ಆಳಂದ ತಾಲೂಕಿನಲ್ಲಿ ವಿಂಡ್ ಪವರ್ ಕಂಪನಿಗಳಿಂದ ರೈತರಿಗಾಗುತ್ತಿರುವ ಅನ್ಯಾಯವನ್ನು ಸರಿಪಡಿಸಿ ಗಡಿಭಾಗದ ಬಡ ರೈತರಿಗೆ ನ್ಯಾಯ ದೊರಕಿಸಿ ಕೊಡಲು ಒತ್ತಾಯಿಸಿದ್ದಾರೆ.

ಆಳಂದ ತಾಲೂಕಿನಲ್ಲಿ ಸುಮಾರು 2-3 ವರ್ಷಗಳಿಂದ ವಿಂಡ್ ಪವರ್ ಕಂಪನಿಯವರು ರೈತರ ಜಮೀನಿಗಳಲ್ಲಿ ಪವನ ವಿದ್ಯುತ್ ಉತ್ಪಾದನಾ ಘಟಕಗಳನ್ನು ಕೂಡಿಸುತ್ತಿದ್ದಾರೆ. ಒಂದು ಘಟಕಕ್ಕೆ 10.00 ಎಕರೆ ಜಮೀನು ಖರೀದಿಸಬೇಕೆಂಬ ನಿಯಮವಿದ್ದರೂ ಕೂಡ ಕಂಪನಿಯವರು ಸರ್ಕಾರದ ಎಲ್ಲಾ ನಿಯಮಗಳನ್ನು ಗಾಳಿಗೆ ತೂರಿ ದಲ್ಲಾಳಿಗಳ ಮುಖಾಂತರ ಮನಸೋ ಇಚ್ಛೇ ರೈತರ ಜಮೀನುಗಳನ್ನು ಕಬಳಿಸುತ್ತಿದ್ದಾರೆ. ರೈತರ ಗೋಳು ಕೇಳುವರ್ಯಾರು? ಎಂದು ಪ್ರಶ್ನಿಸಿದ್ದಾರೆ.

ಇತ್ತೀಚಿಗೆ ಬಾಗಲಕೋಟೆ ಉಪಚುನಾವಣೆಗೆ ಪ್ರಚಾರಕ್ಕೆ ಬಂದ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯರವರು ಆಲಮಟ್ಟಿ ಹಿನ್ನೀರಿನಲ್ಲಿ ಮುಳುಗಡೆಯಾಗುವ ನೀರಾವರಿ ಜಮೀನಿಗೆ 40.00 ಲಕ್ಷ ರೂ. ಪ್ರತಿ ಎಕರೆಗೆ ಒಣ ಬೇಸಾಯ ಜಮೀನಿಗೆ 30 ಲಕ್ಷ. ರೂ ಪ್ರತಿ ಎಕರೆಗೆ ನೀಡುವುದಾಗಿ ಸರ್ಕಾರದ ನಿರ್ಧಾರವನ್ನು ತಿಳಿಸಿರುತ್ತಾರೆ. ಪ್ರಸ್ತುತ ನಡೆಯುತ್ತಿರುವ ಬಿಡದಿ ಟೌನಶಿ???ನಲ್ಲಿ ಜಮೀನು ಕಳೆದುಕೊಳ್ಳುತ್ತಿರುವ ರೈತರಿಗೆ ದಯಾಳುಗಳಾದ ತಾವುಗಳು ಒಂದು ಎಕರೆಗೆ 2.07 ಕೋಟಿ ರೂಪಾಯಿಗಳ ಚೆಕ್ಕುಗಳನ್ನು ರೈತರಿಗೆ ನೀಡುತ್ತಿರುವುದು ನೋಡಿ ನಮ್ಮ ಬಾಯಿಗೆ ನೀರು ಬರುತ್ತಿದೆ ಎಂದು ಹೇಳಿದ್ದಾರೆ.

ಹಾಗಾದರೇ ಕಲ್ಯಾಣ ಕರ್ನಾಟಕದ ಮಹಾರಾಷ್ಟ್ರದ ಗಡಿ ಭಾಗದಲ್ಲಿರುವ ಆಳಂದ ತಾಲೂಕಿನ ರೈತರುಗಳಾದ ನಾವುಗಳು ಕೇವಲ 2.00 ಲಕ್ಷ, 4.00 ಲಕ್ಷ ಪ್ರತಿ ಎಕರೆಗೆ ಪಡೆದುಕೊಂಡು ಜಮೀನು ನೀಡಲು ನಾವುಗಳು ಪಾಪಿಗಳೇ, ದಿಕ್ಕಿಲ್ಲದವರೇ ಎಂಬ ವ್ಯಥೆ ನಮ್ಮ ರೈತರನ್ನು ಕಾಡುತ್ತಿದೆ. ಆದ್ದರಿಂದ ಮಾನ್ಯ ಮುಖ್ಯಮಂತ್ರಿಗಳು ಇದನ್ನು ಗಂಭೀರವಾಗಿ ಪರಿಗಣಿಸಿ ನಮ್ಮ ಭಾಗದ ರೈತರಿಗೆ ಪ್ರತಿ ಎಕರೆಗೆ 2 ಕೋಟಿ ರೂ. ನೀಡುವಂತೆ ವಿನಂತಿಸಿಕೊಂಡಿದ್ದಾರೆ. ನಿಯೋಗದಲ್ಲಿ ಮುಖಂಡರಾದ ಅಜೀತ ಕುಲಕರ್ಣಿ, ಈರಣ್ಣಾ ಹತ್ತರಕಿ, ಮಹೇಶ ಕೋರಳ್ಳಿ, ಮನೋಜ ಸಿಂಗೆ, ಮಹೇಶ ಪವಾರ, ಶೀರಿಷ್ ವರ್ಧಮಾನೆ, ಮೌಲಾಲಿ ಆಳಂದ, ಬಸವರಾಜ ವಾಡೇದ ಇದ್ದರು.

# ರೈತರಿಗೆ ಎಸ್ಐಆರ್ ಬಗ್ಗೆ ಮಾರ್ಗದರ್ಶನ ನೀಡಲು: ಕರವೇ ಒತ್ತಾಯ

**ಕಲಬುರಗಿ:ಜು.2:** ರಾಜ್ಯದಲ್ಲಿ ನಡೆಯುತ್ತಿರುವ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆಯ ಕುರಿತು ಗ್ರಾಮೀಣ ಭಾಗದಲ್ಲಿನ ಕೃಷಿ ಕೂಲಿ ಕಾರ್ಮಿಕರು, ಅನಕ್ಷರಸ್ಥರು, ಸೇರಿದಂತೆ ಬಹುತೇಕರಿಗೆ ಅಧಿಕಾರಿಗಳು ಮಾರ್ಗದರ್ಶನ ನೀಡಬೇಕು ಕರವೇ(ಪ್ರವೀಣ ಶೆಟ್ಟಿ) ಬಣದ ಕಲಬುರಗಿ ತಾಲೂಕು ಅಧ್ಯಕ್ಷ ವಿಜಯಕುಮಾರ ಅಂಕಲಗಿ ಅವರು ಒತ್ತಾಯಿಸಿದರು.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ಮತಗಟ್ಟೆ ಅಧಿಕಾರಿಗಳು ಮತದಾರರಿಗೆ ಎನ್ಯೂಮರೇಷನ್ ನಮೂನೆಗಳನ್ನು ನೀಡಿದ ನಂತರ, ಅವುಗಳ ಮಹತ್ವದ ಕುರಿತು, ಜನರಿಗೆ ತಿಳಿವಳಿಕೆ ಮೂಡಿಸಬೇಕು,45 ವರ್ಷ ಮೇಲ್ಪಟ್ಟವರು,ಯಾವ ಭಾಗದಲ್ಲಿ ಅರ್ಜಿ ನಮೂನೆ ಭರ್ತಿ ಮಾಡಬೇಕು,

45 ವರ್ಷದೊಳಗಿನವರು ಯಾವ ಭಾಗದಲ್ಲಿ ಭರ್ತಿ ಮಾಡಬೇಕು ಎನ್ನುವ ಕುರಿತು, ಪಟ್ಟಣದಲ್ಲಿ ಪ್ರತಿಯೊಂದು ವಾರ್ಡಗಳಲ್ಲಿ ಬಹಿರಂಗ ಸಭೆಗಳನ್ನು ಆಯೋಜಿಸಿ, ಮಾದರಿ ನಮೂನೆಗಳನ್ನು ಸಿದ್ಧಪಡಿಸಿ, ಪ್ರಾತ್ಯಕ್ಷಿಕೆ ಕೊಡಬೇಕು.ಹಳ್ಳಿಗಳಲ್ಲಿ ಆಯಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರತಿಯೊಂದು ಹಳ್ಳಿಯಲ್ಲೂ ಜನರಿಗೆ ಜಾಗೃತಿ ಮೂಡಿಸುವಂತಹ ಕೆಲಸವನ್ನು ಮಾಡಬೇಕಿದೆ ಎಂದರು. ಅನಕ್ಷರಸ್ಥರು ಜನನ ಪ್ರಮಾಣ ಪತ್ರಗಳನ್ನು ಮಾಡಿಸಿರುವುದಿಲ್ಲ. ಅಂತವರಿಗೆ ಮಾಹಿತಿ ನೀಡಬೇಕು ಎಂದರು.

ಧೈರ್ಯದ ದಾರಿ

ಶುಕ್ರವಾರ: 03-07-2026

# ಮಹಾರಾಷ್ಟ್ರ ಗಡಿ ಪ್ರದೇಶದಲ್ಲಿ ಕನ್ನಡ ಶಾಲೆಗಳ ಪುನಶ್ಚೇತನಕ್ಕೆ ಹಳೆಯ ವಿದ್ಯಾರ್ಥಿಗಳ ಹೆಜ್ಜೆ



**ಕಾರುಣಿ ಸಲಗರ, ಅಕ್ಕಲಕೋಟೆ:ಜು 2:** ಕರ್ನಾಟಕ–ಮಹಾರಾಷ್ಟ್ರ ಗಡಿ ಪ್ರದೇಶದಲ್ಲಿ ಕನ್ನಡ ಮಾಧ್ಯಮ ಶಾಲೆಗಳ ನಿರಂತರ ಕುಸಿತದ ಬಗ್ಗೆ ಕಳವಳ ವ್ಯಕ್ತಪಡಿಸಿದ ಕಾರುಣಿ ಸಲಗರ ಹಳೆಯ ವಿದ್ಯಾರ್ಥಿಗಳು ಬುಧವಾರ ಕಾರುಣಿ ಸಲಗರ, ಸಿದ್ದೇಶ್ವರ ಪ್ರೌಢಶಾಲೆಯಲ್ಲಿ ಕನ್ನಡ ಭಾಷೆ ಮತ್ತು ಕನ್ನಡ ಮಾಧ್ಯಮ ಶಿಕ್ಷಣವನ್ನು ರಕ್ಷಿಸುವ ಮತ್ತು ಉತ್ತೇಜಿಸುವ ಕ್ರಮಗಳನ್ನು ಚರ್ಚಿಸಲು ಸಭೆಯನ್ನು ಆಯೋಜಿಸಿದ್ದರು.

ಸಭೆಯಲ್ಲಿ, ಸುಮಾರು ಎರಡು ದಶಕಗಳ ಹಿಂದೆ, ಮಹಾರಾಷ್ಟ್ರ ಗಡಿ ಗ್ರಾಮಗಳಲ್ಲಿ ಹಲವಾರು ಕನ್ನಡ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದ್ದವು ಎಂದು ನೆನಪಿಸಿಕೊಂಡರು. ಆದಾಗ್ಯೂ, ಇತ್ತೀಚಿನ ವರ್ಷಗಳಲ್ಲಿ, ವಿದ್ಯಾರ್ಥಿಗಳ ಪ್ರವೇಶ ಕಡಿಮೆಯಾಗುತ್ತಿರುವುದರಿಂದ ಕನ್ನಡ ಶಾಲೆಗಳ ಸಂಖ್ಯೆ ಕ್ರಮೇಣ ಕಡಿಮೆಯಾಗಿದೆ.

ಅಕ್ಕಲಕೋಟೆ ತಾಲ್ಲೂಕು ಮತ್ತು ಹತ್ತಿರದ ಗಡಿ ಗ್ರಾಮಗಳ ಅನೇಕ ಮನೆಗಳಲ್ಲಿ ಕನ್ನಡ ಮಾತನಾಡುವ ಪ್ರಾಥಮಿಕ ಭಾಷೆಯಾಗಿ ಮುಂದುವರಿದಿದ್ದರೂ, ಅನೇಕ ಪೊ?ಷಕರು ತಮ್ಮ ಮಕ್ಕಳಿಗೆ ಇಂಗ್ಲಿಷ್ ಮತ್ತು ಮರಾಠಿ ಮಾಧ್ಯಮ ಶಾಲೆಗಳನ್ನು ಹೆಚ್ಚಾಗಿ ಆಯ್ಕೆ ಮಾಡುತ್ತಿದ್ದಾರೆ ಎಂದು ಭಾಗವಹಿಸುವವರು ಕಳವಳ ವ್ಯಕ್ತಪಡಿಸಿದರು. ಮಾತೃಭಾಷಾ ಶಿಕ್ಷಣದ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಪ್ರಾಮುಖ್ಯತೆ ಮತ್ತು ಕನ್ನಡ ಮಾಧ್ಯಮ ಶಾಲೆಗಳಲ್ಲಿ ಅಧ್ಯಯನ ಮಾಡುವುದರಿಂದಾಗುವ ದೀರ್ಘಕಾಲೀನ ಪ್ರಯೋಜನಗಳ ಬಗ್ಗೆ ಪೊ?ಷಕರಲ್ಲಿ ಜಾಗೃತಿ ಮೂಡಿಸುವ ಅಗತ್ಯವನ್ನು ಅವರು ಒತ್ತಿ ಹೇಳಿದರು.

ಕನ್ನಡ ಶಾಲೆಗಳ ಅವನತಿಗೆ ಬದಲಾಗುತ್ತಿರುವ ಶೈಕ್ಷಣಿಕ ಆದ್ಯತೆಗಳು, ಅಸಮರ್ಪಕ ಮೂಲಸೌಕರ್ಯ ಮತ್ತು ಹೆಚ್ಚಿನ ಸಾಂಸ್ಥಿಕ ಬೆಂಬಲದ ಅಗತ್ಯ ಸೇರಿದಂತೆ ವಿವಿಧ ಕಾರಣಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು. ಗಡಿ ಪ್ರದೇಶದಲ್ಲಿ ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಸಂರಕ್ಷಿಸಲು ಸಮಾಜ, ಶಿಕ್ಷಣ ಸಂಸ್ಥೆಗಳು ಮತ್ತು ಸರ್ಕಾರಗಳಿಂದ ಸಾಮೂಹಿಕ ಪ್ರಯತ್ನಗಳು ಬೇಕಾಗುತ್ತವೆ ಎಂದು ಭಾಗವಹಿಸುವವರು ಒತ್ತಿ ಹೇಳಿದರು.

ಕರ್ನಾಟಕ–ಮಹಾರಾಷ್ಟ್ರ ಗಡಿ ಪ್ರದೇಶದಲ್ಲಿ ಕನ್ನಡ ಮಾಧ್ಯಮ ಶಾಲೆಗಳನ್ನು ರಕ್ಷಿಸಲು ಮತ್ತು ಬಲಪಡಿಸಲು ಮತ್ತು ಕನ್ನಡ ಭಾಷೆಯನ್ನು ಉತ್ತೇಜಿಸಲು ಮೀಸಲಾಗಿರುವ ಬಲವಾದ ಮತ್ತು ಶಾಶ್ವತ ಸಂಘಟನೆಯನ್ನು ಸ್ಥಾಪಿಸುವುದು ಸಭೆಯ ಪ್ರಮುಖ ನಿರ್ಣಯವಾಗಿತ್ತು.ಕರ್ನಾಟಕ ಮತ್ತು ಮಹಾರಾಷ್ಟ್ರ ಸರ್ಕಾರಗಳಿಗೆ ಜ್ಞಾಪಕ ಪತ್ರಗಳನ್ನು ಸಲ್ಲಿಸಲು ನಿರ್ಧರಿಸಿದರು, ಅಸ್ತಿತ್ವದಲ್ಲಿರುವ ಕನ್ನಡ ಮಾಧ್ಯಮ ಶಾಲೆಗಳನ್ನು ರಕ್ಷಿಸಲು, ಶೈಕ್ಷಣಿಕ ಮೂಲಸೌಕರ್ಯವನ್ನು ಸುಧಾರಿಸಲು, ಸಾಕಷ್ಟು ಬೋಧನಾ ಸಿಬ್ಬಂದಿಯನ್ನು ನೇಮಿಸಲು ಮತ್ತು ಗಡಿ ಪ್ರದೇಶಗಳಲ್ಲಿ ಕನ್ನಡ ಶಿಕ್ಷಣದ ಅಭಿವೃದ್ಧಿಗಾಗಿ ವಿಶೇಷ ಯೋಜನೆಗಳನ್ನು ಪರಿಚಯಿಸಲು ವಿನಂತಿಸಿದರು.

ಸಭೆಯಲ್ಲಿ ಸಿದ್ದೇಶ್ವರ ಪ್ರೌಢಶಾಲೆಯ ಅಧ್ಯಕ್ಷರಾದ ಶ್ರೀ ಸಿದ್ದರಾಮ ಕಾಲಿಬಟ್ಟೆ, ಶ್ರೀ ಕಲ್ಲೂರ ಎಸ್.ಎಸ್,ವಿಜಯ್ ಕುಮಾರ್ ಕೋಲಿ,ಶ್ರೀ ಸುಭಾಷ್ ಭಡೋಲೆ, ಶ್ರೀ ಕೇಶಣ್ಣ ಲೋಹರ್ ಮತ್ತು ಹಲವಾರು ಹಳೆಯ ವಿದ್ಯಾರ್ಥಿಗಳು, ಶಿಕ್ಷಕರು, ಸಮಾಜ ಸೇವಕರು, ಶಿಕ್ಷಣ ತಜ್ಞರು ಮತ್ತು ಕನ್ನಡ ಪ್ರೇಮಿಗಳು ಭಾಗವಹಿಸಿದ್ದರು. ಕನ್ನಡ ಮಾಧ್ಯಮ ಶಾಲೆಗಳ ಪುನರುಜ್ಜೀವನ ಮತ್ತು ಬೆಳವಣಿಗೆ ಮತ್ತು ಭವಿಷ್ಯದ ಪೀಳಿಗೆಗೆ ಕನ್ನಡ ಭಾಷೆಯ ಸಂರಕ್ಷಣೆಗಾಗಿ ಒಟ್ಟಾಗಿ ಕೆಲಸ ಮಾಡುವುದಾಗಿ ಅವರು ಸರ್ವಾನುಮತದಿಂದ ಪ್ರತಿಜ್ಞೆ ಮಾಡಿದರು.

ಈ ಮಹತ್ವದ ಉಪಕ್ರಮಕ್ಕೆ ಅಮೂಲ್ಯವಾದ ಸಲಹೆಗಳು ಮತ್ತು ಪೂರ್ಣ ಹೃದಯದ ಬೆಂಬಲಕ್ಕಾಗಿ ಭಾಗವಹಿಸಿದ ಎಲ್ಲರಿಗೂ ಧನ್ಯವಾದಗಳನ್ನು ಅರ್ಪಿಸುವ ಮೂಲಕ ಸಭೆ ಮುಕ್ತಾಯವಾಯಿತು.

# ಭಾರತೀಯ ಶ್ರೇಷ್ಟ ಪರಿಸರವಾದಿ ಸಾಲುಮರದ ತಿಮ್ಮಕ್ಕ



**ಕಲಬುರಗಿ :ಜು.2:** ಸಾಲುಮರದ ತಿಮ್ಮಕ್ಕನವರು ನಮ್ಮ ಕನ್ನಡ ನೆಲದ ಅಪರೂಪದ, ಮಾದರಿಯ ಸಾಧಕಿಯಾಗಿದ್ದಾರೆ. ಅವರೊಬ್ಬ ಭಾರತೀಯ ಶ್ರೇಷ್ಟ ಪರಿಸರವಾದಿ. ತಮಗೆ ಮಕ್ಕಳಿಲ್ಲದ ಕಾರಣಕ್ಕೆ ರಸ್ತೆಯ ಬದಿಯಲ್ಲಿ ಆಲದ ಸಸಿಗಳನ್ನು ನೆಟ್ಟು ಅವುಗಳನ್ನೇ ತಮ್ಮ ಮಕ್ಕಳಂತೆ ಭಾವಿಸಿ ಬೆಳೆಸಿದವರು. ಅನಕ್ಷರಸ್ಥೆಯಾಗಿದ್ದರೂ ಪರಿಸರ ಸಂರಕ್ಷಣೆಯಲ್ಲಿ ಮಹತ್ತರ ಕಾರ್ಯ ಮಾಡಿದ್ದಾರೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ್ ಹೇಳಿದರು.

ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪದ 'ರಿಪಬ್ಲಿಕ್ ಸ್ಪೋಕನ್ ಇಂಗ್ಲೀಷ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ 'ಸಾಲು ಮರದ ತಿಮ್ಮಕ್ಕನವರ 115ನೇ ಜನ್ಮದಿನಾಚರಣೆ'ಯಲ್ಲಿ ಅವರು ಮಾತನಾಡುತ್ತಿದ್ದರು.

ತಿಮ್ಮಕ್ಕನವರಲ್ಲಿರುವ ಪರಿಸರದ ಕಾಳಜಿ ನಮ್ಮೆಲ್ಲರಿಗೆ ಮಾದರಿಯಾಗಿದೆ. ನಾವೆಲ್ಲರು ಗಿಡ–ಮರಗಳನ್ನು ಬೆಳೆಸಿ, ಪರಿಸರವನ್ನು ಕಾಪಾಡುವ ಮೂಲಕ ತಿಮ್ಮಕ್ಕನವರ ತತ್ವವನ್ನು ಆಚರಿಸೋಣ. ಈ ನಿಟ್ಟಿನಲ್ಲಿ ನಮ್ಮ ಬಸವೇಶ್ವರ ಸಮಾಜ ಸೇವಾ ಬಳಗವು ಕಳೆದ 9 ವರ್ಷಗಳಲ್ಲಿ 2000ಕ್ಕೂ ಅಧಿಕ ಸಸಿಗಳನ್ನು ನೆಡುವುದು ಮತ್ತು ವಿತರಣೆಯ ಕಾರ್ಯ ಮಾಡುವ ಮೂಲಕ ವೃಕ್ಷಮಾತೆ ತಿಮ್ಮಕ್ಕನವರ ತತ್ವವನ್ನು ಅಳವಡಿಸಿಕೊಂಡಿದೆ. ಮಾತೆಯವರು ಕಳೆದ ಕೆಲವು ತಿಂಗಳಿನ ಹಿಂದೆ ನಿಧನರಾಗುವ ಮೂಲಕ ನಾಡು, ದೇಶಕ್ಕೆ ತುಂಬಲಾರದ ನಷ್ಟವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ದತ್ತು ಹಡಪದ, ಶಿವಯೋಗೆಪ್ಪಾ ಎಸ್.ಬಿರಾದಾರ, ದಿನೇಶ್ ಮಿಶ್ರಾ, ಅಮರ ಬಂಗರಗಿ ಹಾಗೂ ವಿದ್ಯಾರ್ಥಿಗಳಿದ್ದರು.

# ಸರ್ಕಾರಿ ಪಿಯು ಕಾಲೇಜುಗಳಿಗೆ ಮೂಲಭೂತ ಸೌಕರ್ಯ ಕಲ್ಪಿಸಿ: ಸುರೇಶ ಅಕ್ಕಣ್ಣ



**ಕಲಬುರಗಿ,ಜು.2**–ನಗರದ ಸೆಂಟ್ ಮೇರಿ ಪದವಿ ಪೂರ್ವ ಕಾಲೇಜಿನ ಸಭಾಂಗಣದಲ್ಲಿ ನಿನ್ನೆ ನಡೆದ ಕಲಬುರಗಿ ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಸುರೇಶ ಅಕ್ಕಣ್ಣ ಅವರ ಅಭಿನಂದನಾ ಸಮಾರಂಭ ನಡೆಯಿತು.

ಅಭಿನಂದನೆ ಸ್ವೀಕರಿಸಿ ಮಾತನಾಡಿದ ಸುರೇಶ ಅಕ್ಕಣ್ಣ ಅವರು ನನ್ನ ಸುದೀರ್ಘ 32 ವರ್ಷಗಳ ಸರ್ಕಾರಿ ಸೇವೆಯಲ್ಲಿ ನನಗೂ ಹಾಗು ಕಲಬುರಗಿ ನಗರಕ್ಕೆ ಅವಿನಾಭಾವ ಸಂಬಂಧವಿದೆ. ಏಕೆಂದರೆ ನಾನು ಸರ್ಕಾರಿ ಪದವಿ ಪೂರ್ವ ಕಾಲೇಜು ಉಪನ್ಯಾಸಕರಾಗಿ ಸೇವೆ ಪ್ರಾರಂಭ ಮಾಡಿದ್ದು ಇದೇ ಜಿಲ್ಲೆಯ ನಿಂಬರ್ಗಾ ಪದವಿ ಪೂರ್ವ ಕಾಲೇಜಿನಲ್ಲಿ ನಾನು ಉಪನಿರ್ದೇಶಕರಾಗಿ ವಯೋನಿವೃತ್ತಿ ಹೊಂದುತ್ತಿರುವ ಇದೆ ಜಿಲ್ಲೆಯಲ್ಲಿ ಇದೊಂದು ಕಾಕತಾಳೀಯ ಎಂದರೆ ತಪ್ಪಾಗಲಾರದು. ನನ್ನ 32 ವರ್ಷಗಳ ಸಾರ್ವಜನಿಕ ಸೇವೆಯಲ್ಲಿ ಉಪನ್ಯಾಸಕನಾಗಿ, ಪ್ರಾಚಾರ್ಯರಾಗಿ ಮತ್ತು ಕಲಬುರಗಿ ಜಿಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕನಾಗಿ ನಿವೃತ್ತಿ ಹೊಂದುತ್ತಿರುವದು ನನಗೆ ಖುಷಿ ತಂದಿದೆ. ಈ ನನ್ನ ಅವಧಿಯಲ್ಲಿ ಈ ವರ್ಷದ ಫಲಿತಾಂಶ ನನಗೆ ವೈಯಕ್ತಿಕವಾಗಿ ತೃಪ್ತಿ ತಂದಿದೆ. ಸೃಷ್ಟಿ ಪಾಟೀಲ ವಿಧ್ಯಾರ್ಥಿನಿ ರಾಜ್ಯಕ್ಕೆ ಪ್ರಥಮ ಬಂದಿರುವುದು ನಮ್ಮ ಇಲಾಖೆಯ ಹೆಮ್ಮೆಯ ವಿಷಯ. ಬಹುಶಃ ಕಲಬುರಗಿ ಬೀದರ್ ಮತ್ತು ಯಾದಗಿರಿ ಜಿಲ್ಲೆಯ ಪದವಿ ಪೂರ್ವ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯಗಳು ಇಲ್ಲದಿರುವುದು ಎದ್ದು ಕಾಣುತ್ತದೆ. ಅವುಗಳು ಸರಿ ಪಡಿಸಿದರೆ

ಮುಂದಿನ ದಿನಗಳಲ್ಲಿ ಇನ್ನಷ್ಟು ಫಲಿತಾಂಶ ಹೆಚ್ಚಿಸಲು ಅನೂಕೂಲವಾಗುವುದು ಎಂದರು. ಕಾರ್ಯಕ್ರಮವನ್ನು ಫಾದರ್ ಜೋಸೆಫ್ ಪ್ರವೀಣ ಉದ್ಘಾಟಿಸಿದರು. ಪ್ರಾಚಾರ್ಯರ ಸಂಘದ ಜಿಲ್ಲಾ ಅಧ್ಯಕ್ಷರಾದ ಶಿವಾನಂದ ಖಜೂರಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ದೇವಣಗೌಡ ಪಾಟೀಲ ಡಾ.ಶರಣಗೌಡ ಪಾಟೀಲ,ನರಸಪ್ಪ ರಂಗೋಲಿ, ಧರ್ಮರಾಜ ಜವಳಿ ಸವಿತಾ ಬಿ ನಾಸಿ ವೇದಿಕೆ ಮೇಲೆ ಉಪಸ್ಥಿತರಿದ್ದರು.

ಪ್ರಮುಖರಾದ ನಾಗರಾಜ ಮೈಲ್ವಾರ ಪಾಂಡು ಎಲ್ ರಾಠೋಡ ಶರಣು ಓಂಕಾರ ಎನ್ ಆರ್ ಕುಲಕರ್ಣಿ ಸಿದ್ದಲಿಂಗ ಪೂಜಾರಿ ,ಜೆ ಮಲ್ಲಪ್ಪ ರಾಜು ಗಂಗಾಧರ ಉಮೇಶ ಅಷ್ಟಗಿ ದಶರಥ ರಾಠೋಡ ಮಹಾದೇವ ನಲಕಂಠೆ ಚಂದ್ರಕಾಂತ ಸನಾದಿ ಮಾಪ್ಪಣ್ಣ ಜೀರೊಳಿ, ಡಾ.ಪ್ರಹ್ಲಾದ್ ಬುರಲಿ ದೇವಿದಾಸ ಪವಾರ ರಮೇಶ ಮಾಡಿಯ್ಯಾಳಕರ, ರವೀಂದ್ರ ಸಜ್ಜಿ ವಿಜಯಕುಮಾರ ರೋಣದ ಭರತೇಶ ಬಳುಂಡಗಿ ಹಣಮಂತರಾಯ ಪಾಟೀಲ ಸುಜಾತಾ ಬೀರಾದಾರ ಪ್ರಭಾವತಿ ಪಾಟೀಲ,ಶಾಂತಾ ಮಾಲಿ ಪಾಟೀಲ್ ಸವಿತಾ ನಾಟೀಕಾರ ಸೇಲ್ವಿ ದೇಶಮಾನೆ ಇತರರು ಉಪಸ್ಥಿತರಿದ್ದರು.

ಸೇಂಟ್ ಮೇರಿ ಕಾಲೇಜಿನಲ್ಲಿ ವಿದ್ಯಾರ್ಥಿನಿಯರು ಪ್ರಾರ್ಥನಾ ಗೀತೆ ಹಾಡಿದರು. ಗುಂಡಯ್ಯ ಸ್ವಾಮಿ ಎಲ್ಲರನ್ನೂ ಸ್ವಾಗತಿಸಿದರು.ಡಾ.ಭೀಮರಾಯ ಅರಕೇರಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಡಾ.ಭಗವಂತರಾಯ ಬಳುಂಡಗಿ ನಿರೂಪಿಸಿದರು. ಶಂಕರ ರೆಡ್ಡಿ ವಂದಿಸಿದರು.

# ಮನೆಯೇ ಮೊದಲ ಪಾಠಶಾಲೆ, ಜನನಿ ಮೊದಲ ಗುರು: ಪ್ರೊ. ಎಸ್.ಬಿ. ಸಜ್ಜನಶೆಟ್ಟಿ




**ಬೀದರ್:** ನಗರದ ಸರಸ್ವತಿ ಶಿಕ್ಷಣ ವಿಕಾಸ ಸಮಿತಿ ಸಂಚಾಲಿತ ಸರಸ್ವತಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸೋಮವಾರ ಪಾಲಕರ ಸಭೆ ನಡೆಯಿತು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಪ್ರೊ. ಎಸ್.ಬಿ. ಸಜ್ಜನಶೆಟ್ಟಿ ಮಾತನಾಡಿ, "ಮನೆಯೇ ಮೊದಲ ಪಾಠಶಾಲೆ, ಜನನಿ ತಾನೆ ಮೊದಲ ಗುರು" ಎಂಬ ಮಾತಿನ ಮಹತ್ವವನ್ನು ವಿವರಿಸಿದರು. ಜನನಿಯಿಂದ ಉತ್ತಮ ಪಾಠ ಕಲಿತ ಮಕ್ಕಳು ಧನ್ಯರು ಎಂದು ಹೇಳಿದ ಅವರು, ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡುವುದು ಹಾಗೂ ಪ್ರತಿದಿನ ನಿರ್ದಿಷ್ಟ ಅವಧಿವರೆಗೆ ಓದುವ ಅಭ್ಯಾಸ ಬೆಳೆಸುವುದು ಪೋಷಕರ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಮಕ್ಕಳು ತಮ್ಮ ಕೆಲಸವನ್ನು ತಾವೇ ಮಾಡಿಕೊಳ್ಳುವ ಗುಣವನ್ನು ಬೆಳೆಸಬೇಕು ಹಾಗೂ ಸಣ್ಣಪುಟ್ಟ ಕೆಲಸಗಳನ್ನು ನಿರ್ವಹಿಸಲು ಕಲಿಸಬೇಕು ಎಂದ ಅವರು, ಜೀವನದಲ್ಲಿ ಸೋಲು–ಗೆಲುವು ಸಹಜವಾಗಿದ್ದು, ಸೋತಾಗ ಕುಗ್ಗದೆ ಹಾಗೂ ಗೆದ್ದಾಗ ಹಿಗ್ಗದೆ ಸಮಾನ ಮನಸ್ಥಿತಿಯಿಂದ ಬದುಕುವಂತೆ ಮಕ್ಕಳಿಗೆ ಮಾರ್ಗದರ್ಶನ ನೀಡಬೇಕು ಎಂದು ಸಲಹೆ ನೀಡಿದರು.

ಪ್ರಾರ್ಥನೆಯಿಂದ ಮಕ್ಕಳಲ್ಲಿ ಶಾಂತಿ ಮತ್ತು ನೆಮ್ಮದಿ ನೆಲೆಸುತ್ತದೆ. ಆದ್ದರಿಂದ ಪ್ರತಿದಿನ ತಂದೆ–ತಾಯಿಯರ ಪಾದ ಮುಟ್ಟಿ ನಮಸ್ಕರಿಸುವುದು ಹಾಗೂ ಶಾಲೆಯ ಮುಖ್ಯ ದ್ವಾರಕ್ಕೆ ನಮಸ್ಕರಿಸಿ ಶಾಲೆಗೆ ಬರುವ ಸಂಸ್ಕಾರವನ್ನು ಬೆಳೆಸಬೇಕು ಎಂದರು. ಜೊತೆಗೆ ಪ್ರತಿದಿನ ರಾತ್ರಿ ಕುಟುಂಬದ ಎಲ್ಲ ಸದಸ್ಯರು ಒಟ್ಟಾಗಿ ಕುಳಿತು ಊಟ ಮಾಡುವ ಅಭ್ಯಾಸ ಬೆಳೆಸುವಂತೆ ಕರೆ ನೀಡಿದರು. ದೇಶ ಹಾಗೂ ವಿಶ್ವದ ಉತ್ತಮ ಭವಿಷ್ಯಕ್ಕಾಗಿ ಮಕ್ಕಳನ್ನು ಉತ್ತಮ ನಾಗರಿಕರಾಗಿ ರೂಪಿಸುವ ಜವಾಬ್ದಾರಿ ಎಲ್ಲರ ಮೇಲಿದೆ ಎಂದು ಹೇಳಿದರು.

ಕಾರ್ಯಕ್ರಮದ ಸಮಾರೋಪ ಭಾಷಣ ಮಾಡಿದ ಆಡಳಿತ ಮಂಡಳಿ ಸದಸ್ಯ ಶ್ರೀ ಶಿವಶರಣಪ್ಪ ಪಾಟೀಲ ಅವರು, ಶಿಕ್ಷಕರು ಮತ್ತು ಪಾಲಕರ ಸಹಕಾರವಿದ್ದರೆ ಮಾತ್ರ ಮಕ್ಕಳು ಯಶಸ್ಸು ಸಾಧಿಸಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು. ಒಂದು ಕಟ್ಟಡ ನಿರ್ಮಾಣಕ್ಕೆ ನಾಲ್ಕು ಕಂಬಗಳು ಅಗತ್ಯವಿರುವಂತೆ, ಮಕ್ಕಳ ಭವಿಷ್ಯ ರೂಪಿಸುವಲ್ಲಿ ಶಿಕ್ಷಕರು, ಪಾಲಕರು, ಆಡಳಿತ ಮಂಡಳಿ ಹಾಗೂ ಮಕ್ಕಳು ಎಂಬ ನಾಲ್ಕು ಅಂಶಗಳು ಪ್ರಮುಖ ಪಾತ್ರ ವಹಿಸುತ್ತವೆ ಎಂದು ಹೇಳಿದರು.

ಮಕ್ಕಳಿಗೆ ಯಾವ ವಿಷಯದಲ್ಲಿ ಹೆಚ್ಚಿನ ಆಸಕ್ತಿ ಇದೆಯೋ ಆ ಕ್ಷೇತ್ರದಲ್ಲಿ ಮುಂದುವರಿಯಲು ಪ್ರೋತ್ಸಾಹ ನೀಡಬೇಕು ಹಾಗೂ ಉತ್ತಮ ಸಂಸ್ಕಾರಗಳನ್ನು ಕಲಿಸುವುದು ಪೊಷಕರ ಹಾಗೂ ಶಿಕ್ಷಕರ ಜವಾಬ್ದಾರಿಯಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

ಕಾರ್ಯಕ್ರಮದ ವೇದಿಕೆಯಲ್ಲಿ ಸರಸ್ವತಿ ಶಾಲೆಯ ಮುಖ್ಯಗುರು ಶ್ರೀಮತಿ ಊರ್ಮಿಳಾ ಬಕ್ಷಿ ಉಪಸ್ಥಿತರಿದ್ದರು.

ಶಿಕ್ಷಕ ನಾಮದೇವ ರಾಠೋಡ್ ಅವರು ಸ್ವಾಗತಿಸಿ ಪರಿಚಯಿಸಿದರು. ರೇಖಾ ಸಾಳೆ ಮತ್ತು ಜಗದೀಶ್ವರಿ ಅವರು ವೈಯಕ್ತಿಕ ಗೀತೆಗಳನ್ನು ಹಾಡಿದರು. ಶ್ರೀದೇವಿ ಮಾಣಿಕರಾವ ವಂದನಾರ್ಪಣೆ ಸಲ್ಲಿಸಿದರೆ, ಮೀನಾಕ್ಷಿ ಖಡಕೆ ಕಾರ್ಯಕ್ರಮವನ್ನು ನಿರೂಪಿಸಿದರು.

ಸಭೆಯಲ್ಲಿ ಸುಮಾರು 300ಕ್ಕೂ ಹೆಚ್ಚು ಪಾಲಕರು ಭಾಗವಹಿಸಿದ್ದು, ಸಾಮೂಹಿಕ ಶಾಂತಿಮಂತ್ರದೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿತು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE